ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೨

# ಪಟ್ಟಿ – ೦೪

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತನೆಯ ಅಧಿವೇಶನ**

**ಶುಕ್ರವಾರ, ದಿನಾಂಕ : ೦೬ನೇ ಮಾರ್ಚ್, ೨೦೨೦**

---

## ಸಮೂಹ – V

೧. ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

೪. ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು

೫. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

೬. ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

---

## ಬೀದರ್ ಜಿಲ್ಲೆಯಲ್ಲಿನ ಎಸ್.ಸಿ.ಪಿ./ಟಿ.ಎಸ್.ಪಿ ಯೋಜನೆ ಕುರಿತು

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–

೨೬೨ (೩೪೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಬೀದರ್ ಜಿಲ್ಲೆಯ ಜಿಲ್ಲಾ ಪಂಚಾಯತ್‌ನಲ್ಲಿ ಎಸ್.ಸಿ.ಪಿ./ಟಿ.ಎಸ್.ಪಿ. ಅನುದಾನ ಖರ್ಚು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಅಧಿಕಾರಿಗಳ ವಿರುದ್ಧ ಎಸ್.ಸಿ.ಪಿ./ ಟಿ.ಎಸ್.ಪಿ. ಯ ಕಾಯ್ದೆ ೨೦೧೩ರ ಪ್ರಕಾರ ಕ್ರಮ ಕೈಗೊಳ್ಳದಿರಲು ಕಾರಣವೇನು ; ಕ್ರಮ ಕೈಗೊಳ್ಳದಿದ್ದರೆ ಮುಂದೆ ಇಂತಹ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ?

## ಬೀದರ್ ಜಿಲ್ಲೆಯಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಗೊಳಿಸುವ ಕುರಿತು

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–

೨೬೩ (೩೪೨) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಮಾಡೆಲ್ ಟೂರಿಸ್ಟ್ ಡೆಸ್ಟಿನೇಷನ್ (Model Tourist Destination) ಪ್ರವಾಸಿ ತಾಣ ಯೋಜನೆಯಡಿಯಲ್ಲಿ ೨೦೧೬ಕ್ಕೆ ಸರ್ಕಾರದಿಂದ ಕೇಂದ್ರ ಸರ್ಕಾರಕ್ಕೆ ಸಲ್ಲಿಕೆಯಾದ ಪ್ರಸ್ತಾವನೆ ಯಾವ ಹಂತದಲ್ಲಿದೆ ; ಅದಕ್ಕಾಗಿ ರಾಜ್ಯ ಸರ್ಕಾರ ಮಾಡಿರುವ ಪ್ರಯತ್ನವೇನು ; ಈ ಯೋಜನೆಯನ್ನು ಮಂಜೂರು ಮಾಡುವಲ್ಲಿ ತೆಗೆದುಕೊಂಡ ಕ್ರಮವೇನು ;

(ಆ) ಬೀದರ್ ಜಿಲ್ಲೆಯು ಸ್ವದೇಶ ದರ್ಶನ ಯೋಜನೆಯಡಿಯಲ್ಲಿ ೨೦೧೮ರಲ್ಲಿ ಟೂರಿಸಮ್ ಸರ್ಕ್ಯೂಟ್ (Bidar, Basavakalyan, Kalaburagi, Vijayapura, Badami, Ihole, Pattadakallu) ಇವುಗಳ ಮಧ್ಯೆ ರಾಯಲ್ ಡೆಕ್ಕನ್ ಟೂರಿಸಮ್ ಸರ್ಕ್ಯೂಟ್ ಅಭಿವೃದ್ಧಿಗೋಸ್ಕರ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ ಸಮಗ್ರ ವರದಿ/ ಪ್ರಸ್ತಾವನೆ ಯಾವ ಹಂತದಲ್ಲಿದೆ ; ಇದನ್ನು ಜಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಬೀದರ್ ಜಿಲ್ಲೆಗೆ ಕೇಂದ್ರ ಸರ್ಕಾರದ ಪ್ರವಾಸದ ಯೋಜನೆಯಡಿಯಲ್ಲಿ ಈಗಾಗಲೇ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುವ ಪ್ರಸ್ತಾವನೆ ಯಾವ ಹಂತದಲ್ಲಿದೆ ; ಅದನ್ನು ಜಾರಿಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಈ) ಬೀದರ್ ಜಿಲ್ಲೆಯು ವಿಶ್ವ ಪಾರಂಪಾರಿಕ ತಾಣ ಸೀರಿಯಲ್ ನಾಮಿನೇಷನ್‌ನಲ್ಲಿ ಆಯ್ಕೆಯಾಗಿದ್ದು, ಅದಕ್ಕೆ ಬೇಕಾದಂತಹ ವರದಿಯನ್ನು ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಸಲ್ಲಿಸಬೇಕಾಗಿದ್ದು, ಈ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ ; ಸಲ್ಲಿಸದಿದ್ದಲ್ಲಿ, ಇದಕ್ಕೆ ಕಾರಣವೇನು ?

## ಇಲಾಖೆಯ ಧನಸಹಾಯ ವ್ಯವಸ್ಥೆಯನ್ನು ನಂಬಿದ ಬಡ ಕಲಾವಿದರ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಹಾಗೂ ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–

೨೮೪ (೪೪೩+೩೮೨) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದರಗಾಮಿ ಯೋಜನೆಗಳಾದ ಕನ್ನಡ ಶಾಸ್ತ್ರೀಯ ಉನ್ನತ ಅಧ್ಯಯನ ಕೇಂದ್ರಕ್ಕೆ ಸ್ವಾಯತ್ತೆಯಂಥ ಕಾರ್ಯಕ್ರಮಗಳು ಸಮಸ್ಯೆಯಲ್ಲಿ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಲಾಖೆಯ ಧನಸಹಾಯ ವ್ಯವಸ್ಥೆಯನ್ನು ನಂಬಿ ಬದುಕು ಕಟ್ಟಿಕೊಂಡ ಕಲಾವಿದರಿಗೆ ಧನಸಹಾಯಕ್ಕೆ ಹಣ ನಿಗಧಿ ಮಾಡದೆ ಕಲಾವಿದರ ಜೀವನ ನಡೆಸಲು ಸಾಧ್ಯವಾಗದಿರುವುದು ನಿಜವೇ ; ಕಳೆದ ವರ್ಷ ಅರ್ಜಿ ಪಡೆದು ಸಂಸ್ಥೆಗಳನ್ನು ಆಯ್ಕೆ ಮಾಡಿ ಸರ್ಕಾರದ ಆದೇಶವು ಆಗಿರುವ ಸಂಸ್ಥೆಗಳಿಗೆ ಹಣ ಬಿಡುಗಡೆಯಾಗಿದ್ದು ಗಡಿ ಅಭಿವೃದ್ಧಿ ಪ್ರಾಧಿಕಾರ ಖಾತೆಯಲ್ಲಿ ರೂ. ೧೨ ಕೋಟಿಗೂ ಹೆಚ್ಚು ಹಣ ಇರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಧನಸಹಾಯಕ್ಕೆ ನಿಗಧಿಯಾದ ಹಣವನ್ನು ಬಡಕಲಾವಿದರಿಗೆ ಯಾವ ಕಾಲಮಿತಿಯಲ್ಲಿ ವಿತರಿಸಲು ಸರ್ಕಾರ ಚಿಂತಿಸಿದೆ ; ಮತ್ತು ಈ ಬಗ್ಗೆ ಕೈಗೊಂಡ ಕ್ರಮಗಳೇನು ?

## ಕೆ.ಆರ್.ಐ.ಡಿ.ಎಲ್. ನಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೬೫ (೪೪೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೆ.ಆರ್.ಐ.ಡಿ.ಎಲ್ ನಿಂದ ಕಳೆದ ೦೫ ವರ್ಷಗಳಿಂದ ಕೈಗೊಂಡಿರುವ ಕಾಮಗಾರಿಗಳು ಎಷ್ಟು ; ಪ್ರತ್ಯೇಕವಾಗಿ ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು ;

(ಆ) ಇವುಗಳಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು ; ಹಾಗೂ ಬಳಕೆಯಾದ ಅನುದಾನವೆಷ್ಟು ; (ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪೂರ್ಣಗೊಂಡ ಕಾಮಗಾರಿಗಳ ಗುಣಮಟ್ಟ ಪರಿಶೀಲಿಸಿದ ಏಜೆನ್ಸಿ ಯಾವುದು; (Q.C) (ಜಿಲ್ಲಾವಾರು ಏಜೆನ್ಸಿಯವರ ವಿವರ ನೀಡುವುದು)

(ಈ) ಕೆ.ಆರ್.ಐ.ಡಿ.ಎಲ್ ವತಿಯಿಂದ ನಿರ್ವಹಿಸಿದ ಮತ್ತು ನಿರ್ವಹಿಸುತ್ತಿರುವ ಕಾಮಗಾರಿಗಳು ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಳಪೆ ಕಾಮಗಾರಿಗಳನ್ನು ನಿರ್ವಹಿಸಿರುವವರ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## 'ನಮ್ಮ ಗ್ರಾಮ–ನಮ್ಮ ರಸ್ತೆ' ಯೋಜನೆಯ ಕಾಮಗಾರಿಗಳ ಕುರಿತು

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೬೬ (೪೪೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) "ನಮ್ಮ ಗ್ರಾಮ–ನಮ್ಮ ರಸ್ತೆ" ಯೋಜನೆಯಲ್ಲಿ ಮಂಡ್ಯ ಜಿಲ್ಲೆಯಲ್ಲಿನ ರಸ್ತೆಗಳ ಅಭಿವೃದ್ಧಿಗಾಗಿ ಎಷ್ಟು ಅಂದಾಜು ಮೊತ್ತವನ್ನು ಯಾವ ಯಾವ ರಸ್ತೆಗಳನ್ನು ವಿವಿಧ ಹಂತದಲ್ಲಿ ಪರಿಗಣಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಡ್ಯ ಜಿಲ್ಲೆಯ ಯಾವ ಯಾವ ರಸ್ತೆಗಳು ಉಚಿತ ನಿರ್ವಹಣೆ ಮತ್ತು ದುರಸ್ಥಿ ಕೈಗೊಳ್ಳುವ ಕರಾರಿನಲ್ಲಿವೆ ; ಅದರಂತೆ ಉಚಿತ ನಿರ್ವಹಣೆ ಮತ್ತು ದುರಸ್ಥಿ ಮಾಡಲಾಗಿದೆಯೇ ;

(ಇ) ಹಾಗಿದ್ದಲ್ಲಿ, ಅಂತಹ ರಸ್ತೆಗಳು ಯಾವುವು ; ಯಾವಾಗ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) "ನಮ್ಮ ಗ್ರಾಮ–ನಮ್ಮ ರಸ್ತೆ" ಯೋಜನೆಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಇತರ ಯೋಜನೆಯಲ್ಲಿ ಪರಿಗಣಿಸಿದ ರಸ್ತೆಗಳು ಯಾವುವು ; ಇವುಗಳ ಕಾಮಗಾರಿಯ ಹಂತವೇನು ; (ಪೂರ್ಣ ಮಾಹಿತಿ ನೀಡುವುದು)

(ಉ) ಕೆಲವು ರಸ್ತೆಗಳು ಆರಂಭದ ಹಂತದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದಲ್ಲಿ, ಅವುಗಳ ಕಾಮಗಾರಿಗಳನ್ನು ಯಾವಾಗ ಆರಂಭಿಸಿ ಪೂರ್ಣಗೊಳಿಸಲಾಗುವುದು ?

## ಅಂಗನವಾಡಿ ಮತ್ತು ಕಾರ್ಯಕರ್ತೆಯರಿಗೆ ಸಂಬಂಧಿಸಿದ ಮಾಹಿತಿ

ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) :–

೨೬೭ (೩೬೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿದೆ ; ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡುತ್ತಿರುವ ಗೌರವಧನ ಎಷ್ಟು ; ಅವರ ದಿನದ ಕಾರ್ಯಾವಧಿ ಎಷ್ಟು ;

(ಆ) ರಾಜ್ಯದಲ್ಲಿ ಉರ್ದು ಅಂಗನವಾಡಿ ಕೇಂದ್ರಗಳು ಇದೆಯೇ ; ಇಲ್ಲದಿದ್ದಲ್ಲಿ, ಅಲ್ಪಸಂಖ್ಯಾತರ ಕಲ್ಯಾಣದ ದೃಷ್ಟಿಯಿಂದ ಅಲ್ಪಸಂಖ್ಯಾತರು ಹೆಚ್ಚಾಗಿರುವ ಸ್ಥಳಗಳಲ್ಲಿ ಉರ್ದು ಅಂಗನವಾಡಿ ಕೇಂದ್ರಗಳನ್ನು ಸ್ಥಾಪನೆ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಅಂಗನವಾಡಿ ಕಾರ್ಯಕರ್ತೆಯರ ಬೇಡಿಕೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಸರ್ಕಾರದಿಂದ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳ ಬಗ್ಗೆ

ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) :–

೨೬೮ (೩೭೦) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲ್ಪಸಂಖ್ಯಾತರ ಕಾಲೋನಿಗಳ ಅಭಿವೃದ್ಧಿಗಾಗಿ ೨೦೧೯–೨೦ನೇ ಸಾಲಿನಲ್ಲಿ ಬಿಡುಗಡೆ ಮಾಡಲಾದ ಅನುದಾನ ಎಷ್ಟು ; ಬಳಕೆಯಾದ ಅನುದಾನ ಮತ್ತು ಜಿಲ್ಲಾವಾರು ಪೂರ್ಣಗೊಂಡ ಮತ್ತು ಪ್ರಗತಿಯಲ್ಲಿರುವ ಕಾಮಗಾರಿಗಳು ಯಾವುವು ; (ಸಂಪೂರ್ಣ ವಿವರವುಳ್ಳ ಮಾಹಿತಿ ಒದಗಿಸುವುದು)

(ಆ) ೨೦೧೯–೨೦ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಮತ್ತು ಕೆ.ಎಂ.ಡಿ.ಸಿ.ಗಳಿಂದ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ರೂಪಿಸಲಾಗಿರುವ ವಿವಿಧ ಯೋಜನೆಗಳಿಗೆ ಸಲ್ಲಿಕೆಯಾದ ಅರ್ಜಿಗಳು ಮತ್ತು ಆಯ್ಕೆಯಾದ ಫಲಾನುಭವಿಗಳು ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಕರ್ನಾಟಕ ರಾಜ್ಯ ಉರ್ದು ಅಕಾಡೆಮಿಗೆ ಅಧ್ಯಕ್ಷರು ಮತ್ತು ಸದಸ್ಯರ ನೇಮಕಾತಿ ಮಾಡಲಾಗಿದೆಯೇ ; ಇಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣವೇನು ;

(ಈ) ಬಿದಾಯಿ/ಶಾದಿಭಾಗ್ಯ ಯೋಜನೆಯಡಿ ೨೦೧೯–೨೦ರಲ್ಲಿ ಸಲ್ಲಿಕೆಯಾದ ಅರ್ಜಿಗಳು ಎಷ್ಟು ; ಅದರಲ್ಲಿ ಫಲಾನುಭವಿಗಳ ಸಂಖ್ಯೆ ಎಷ್ಟು ; ಯೋಜನೆಯು ಅರ್ಹ ಫಲಾನುಭವಿಗಳಿಗೆ ಸರಿಯಾದ ಸಮಯದಲ್ಲಿ ತಲುಪಿದೆಯೇ ?

## All India Coordinated Research Project

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–

೨೬ (೩೪೦) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಶ್ವವಿದ್ಯಾಲಯ, ಬೀದರ್‌ರಡಿಯ ಮೀನುಗಾರಿಕೆ ಮಹಾವಿದ್ಯಾಲಯ, ಮಂಗಳೂರು ಇಲ್ಲಿ All India Coordinated Research Project (AICRP) ನಲ್ಲಿ ತಾತ್ಕಾಲಿಕ ಸಿಬ್ಬಂದಿಗಳಿಗೆ ಅಕ್ರಮವಾಗಿ ಸಂಪೂರ್ಣ ವೇತನ ಮತ್ತು ವಾರ್ಷಿಕ ಬಡ್ತಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) AICRP ಯೋಜನೆಯಡಿ ತಾತ್ಕಾಲಿಕ ವಿಜ್ಞಾನಿ (Scientists) ಗಳಿಗೆ ಮಾಹೆಯಾನ ಏಕೀಕೃತ ವೇತನ ರೂ. ೫೭,೪೦೦–೦೦ ಗಳನ್ನು ೧೭೯ ದಿನಗಳಿಗೆ ಮಾತ್ರ ಸೀಮಿತಗೊಳಿಸಿ ನೀಡಲಾಗುತ್ತಿಲ್ಲದಿರುವುದಕ್ಕೆ ಕಾರಣಗಳೇನು ;

(ಇ) ಈ Project ನಡಿ ಎಷ್ಟು ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ಎಷ್ಟು ದಿನಗಳಿಗೆ ನೇಮಿಸಿಕೊಳ್ಳಲಾಗಿದೆ ಹಾಗೂ ಅವರಿಗೆ ಎಷ್ಟು ಸಂಬಳ ನೀಡಲಾಗುತ್ತಿದೆ ;

(ಈ) ಸದರಿ Projectನಲ್ಲಿ ಸಿಬ್ಬಂದಿಗಳನ್ನು ೧೭೯ ದಿನಗಳಿಗೆ ನೇಮಕ ಮಾಡದೆ ಹಾಗೂ ಅವರಿಗೆ ಏಕೀಕೃತ ವೇತನವನ್ನು ನೀಡದೆ ಖಾಯಂ ಸಿಬ್ಬಂದಿಗಳಿಗೆ ನೀಡುವಂತೆ ಹುದ್ದೆಯ ಪೂರ್ಣ ಮೂಲ ವೇತನ, ವಾರ್ಷಿಕ ವೇತನ ಬಡ್ತಿ, ಮನೆ ಬಾಡಿಗೆ ಭತ್ಯೆ ಹಾಗೂ ಇತರೆ ಸವಲತ್ತುಗಳನ್ನು ನೀಡಲಾಗುತ್ತಿರುವುದರಿಂದ ಸಾರ್ವಜನಿಕ ಹಣವು ಪೋಲು ಆಗುತ್ತಿದ್ದು ಅಂತಹವರುಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಉ) ಕಾಲೇಜಿಗೆ ಸಂಬಂಧಿಸಿದ ವಿಭಾಗದಲ್ಲಿ (Fish Processing Technology) ಖಾಯಂ Associate Professor ನೌಕರರು ಇದ್ದರೂ ಸಹ, ಈ ಯೋಜನೆಯಡಿ ತಾತ್ಕಾಲಿಕ (Senior Scientist Associate Professor Cadre) ನೌಕರರನ್ನು ನೇಮಕಾತಿ ಮಾಡಲು ಕಾರಣವೇನು ; ಈ ರೀತಿ Senior Scientist ನ್ನು ನೇಮಕಾತಿ ಮಾಡಿಕೊಳ್ಳಲು ಅವಕಾಶವಿದೆಯೇ ;

(ಊ) ಈ ಯೋಜನೆಯ ಮುಖ್ಯಸ್ಥರು ಖಾಯಂ Associate Professor ಹುದ್ದೆಯಲ್ಲಿರುವ ಸಿಬ್ಬಂದಿ ಇರಬೇಕೆಂದು ನಿಯಮ ಇದ್ದರೂ ಸಹ ಶಿಕ್ಷಕೇತರ ವೃಂದದಲ್ಲಿರುವ ವಿಶ್ವವಿದ್ಯಾಲಯದ ಹಣಕಾಸು ನಿಯಂತ್ರಣಾಧಿಕಾರಿಗಳು ಸ್ವತಃ ಯೋಜನೆಯ ಮುಖ್ಯಸ್ಥರಾಗಿ ಮುಂದುವರೆಯಲು ಕಾರಣವೇನು ;

(ಋ) ಈ ಯೋಜನೆ ಯಾವ ವರ್ಷದಿಂದ ಚಾಲನೆಯಲ್ಲಿದೆ ; ಬಿಡುಗಡೆ ಮತ್ತು ಖರ್ಚಾದ ಅನುದಾನದ ಸಂಪೂರ್ಣ ವಿವರ ಹಾಗೂ ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನದ ಮಾಹಿತಿ ನೀಡುವುದು ?

## ಚಿಕ್ಕಮಗಳೂರು ಪ್ರವಾಸಿ ತಾಣಗಳ ಅಭಿವೃದ್ಧಿ ಕುರಿತು

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–

೨೭೦ (೩೪೫) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯ ಪ್ರವಾಸಿ ತಾಣಗಳ ತಾಲ್ಲೂಕುಗಳು ಯಾವುವು ; ಈ ಪ್ರವಾಸಿ ತಾಣಗಳ ಅಭಿವೃದ್ಧಿಗೆ ೩ ವರ್ಷಗಳಿಂದ ಸರ್ಕಾರ ಇಲ್ಲಿಯವರೆವಿಗೂ ವೆಚ್ಚ ಮಾಡಿರುವ ಹಣವೆಷ್ಟು ; (ವಿವರ ನೀಡುವುದು)

(ಆ) ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರು ತಂಗಲು ವಾಸ್ತವ್ಯದ ಅನಾನುಕೂಲತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕೇಂದ್ರ ಸರ್ಕಾರದಿಂದ ಯಾವ ಕಾರ್ಯಕ್ರಮಗಳಿಗೆ ಅನುದಾನ ನೀಡಲಾಗುತ್ತಿದೆ ; (ವಿವರ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ ಹಾಗೂ ಬಳಕೆಯಾದ ಅನುದಾನ ಎಷ್ಟು ? (ವಿವರ ನೀಡುವುದು)

## ಗ್ರಾಮೀಣ ಸಾರಿಗೆಯ ಸ್ಥಿತಿ ಕುರಿತು

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–

೨೭೧ (೩೪೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣ ಪ್ರದೇಶದಲ್ಲಿ ಸಂಚರಿಸುವ ಸಾರಿಗೆ ಬಸ್ಸುಗಳು ಹಳೆಯದಾಗಿದ್ದು ಅಲ್ಲಲ್ಲಿ ಕೆಟ್ಟು ನಿಲ್ಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಗ್ರಾಮೀಣ ಪ್ರದೇಶದ ರೈತರು/ರೋಗಿಗಳು/ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಇಂತಹ ಬಸ್ಸುಗಳನ್ನು ಬದಲಾಯಿಸಿ ಹೊಸ ಬಸ್ಸುಗಳನ್ನು ಓಡಿಸಲು ಯಾವ ಕ್ರಮ ತೆಗೆದುಕೊಳ್ಳಲಾಗುವುದು ?

## ಯುವ ಕ್ರೀಡಾ ಪಟುಗಳಿಗೆ ಪ್ರೋತ್ಸಾಹ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–

೨೭೨ (೩೪೭) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ನಗರ ಪ್ರದೇಶದಲ್ಲಿ ಮತ್ತು ಗ್ರಾಮೀಣ ಪ್ರದೇಶದಲ್ಲಿ ಯುವ ಮತ್ತು ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ;

(ಆ) ಇದಕ್ಕಾಗಿ ಕಳೆದ ೩ ವರ್ಷಗಳಲ್ಲಿ ಖರ್ಚಾಗಿರುವ ವೆಚ್ಚವೆಷ್ಟು ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಇ) ಯುವ ಕ್ರೀಡಾಪಟುಗಳನ್ನು ಗುರುತಿಸಲು ಅನುಸರಿಸುವ ಮಾನದಂಡಗಳೇನು ; ಇದು ಯಾವ ಕ್ರೀಡೆಗಳಿಗೆ ಅನ್ವಯಿಸುತ್ತದೆ;

(ಈ) ಯುವ ಕ್ರೀಡಾ ಪಟುಗಳಿಗೆ ಉತ್ತೇಜನ ನೀಡಲು ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; ಇದಕ್ಕಾಗಿ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ?

## ರಾಯಚೂರು ನಗರದಲ್ಲಿ ನಗರ ಬಸ್ ನಿಲ್ದಾಣ ನಿರ್ಮಾಣ ಮಾಡುವ ಬಗ್ಗೆ

ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–

೨೭೩ (೩೮೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎನ್‌ಇಕೆಎಸ್‌ಆರ್‌ಟಿಸಿ ವತಿಯಿಂದ ಮಾನ್ವಿ ಪಟ್ಟಣದಲ್ಲಿ ಬಸ್ ಡಿಪೋ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ನಗರದಲ್ಲಿ ನೂತನ ಬಸ್ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯ ನೂತನ ತಾಲ್ಲೂಕು ಸಿರವಾರ ಪಟ್ಟಣದಲ್ಲಿ ನೂತನ ಬಸ್ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಸಿರವಾರ ಪಟ್ಟಣದಲ್ಲಿ ಪ್ರಸ್ತುತ ಇರುವ ಬಸ್ ನಿಲ್ದಾಣದಲ್ಲಿ ಮೂಲಸೌಕರ್ಯಗಳು ಇಲ್ಲದೇ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಗೆ ಆರ್.ಡಿ.ಪಿ.ಆರ್ ಇಲಾಖೆಯಿಂದ ಮಂಜೂರಾತಿಯಾಗಿರುವ ಅನುದಾನದ ಬಗ್ಗೆ

ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–

೨೭೪ (೩೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆದೇಶ ಸಂಖ್ಯೆ:ಗ್ರಾಅಪ: ೧೧೧:ಆರ್.ಆರ್.ಸಿ:೨೦೧೯, ದಿನಾಂಕ: ೦೬-೧೧-೨೦೧೯ರ ಪ್ರಕಾರ ಕೆಲವೊಂದು ವಿಧಾನಸಭಾ ಕ್ಷೇತ್ರಗಳು ಹಾಗೂ ಪ್ರದೇಶಗಳು ಪ್ರವಾಹದಿಂದ ಹಾನಿಗೊಳಗಾಗದೆ ಇದ್ದರೂ ಅನುದಾನ ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ;

(ಆ) ಸದರಿ ಆದೇಶದಲ್ಲಿ ವೈಯಕ್ತಿಕ ಹೆಸರುಗಳ ಮೇಲೆ ನೆರೆಪರಿಹಾರದ ಅನುದಾನ ಮಂಜೂರು ಮಾಡಲಾಗಿದೆಯೇ ; ಇದರ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಜೀವಗಾಂಧಿ ಟೆಕ್ನಾಲಜಿ ಮಿಷನ್ ಅಡಿಯಲ್ಲಿ ಪ್ರಾರಂಭವಾಗಿರುವ ಮಾನ್ವಿ ತಾಲ್ಲೂಕಿನ ಕುರ್ಡಿಕಲ್ಲುರು ಯೋಜನೆಗಳನ್ನು ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ರಾಯಚೂರು ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಇರುವ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿರುವ ಅಲ್ಪಸಂಖ್ಯಾತರ ವಸತಿ ಶಾಲೆಗಳ ಬಗ್ಗೆ

ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-

೨೭೫ (೩೯೦) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ರಾಯಚೂರು ಜಿಲ್ಲೆಗೆ ಮಂಜೂರಾಗಿರುವ ಯೋಜನೆಗಳು ಯಾವುವು ; ಸದರಿ ಯೋಜನೆಗಳಿಗೆ ಮಂಜೂರಾಗಿರುವ ಅನುದಾನ ಎಷ್ಟು ; ಈ ಯೋಜನೆಯ ಸದುಪಯೋಗ ಪಡೆದುಕೊಂಡಿರುವ ಫಲಾನುಭವಿಗಳು ಎಷ್ಟು ;

(ಆ) ರಾಯಚೂರು ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ವಸತಿ ಶಾಲೆ/ವಸತಿ ನಿಲಯಗಳು ಎಷ್ಟು ; ಪ್ರಸ್ತುತ ಇರುವ ವಿದ್ಯಾರ್ಥಿಗಳು ಎಷ್ಟು ; ಸ್ವಂತ ಕಟ್ಟಡಗಳು ಹೊಂದಿರುವ ಹಾಗೂ ಬಾಡಿಗೆ ಕಟ್ಟಡ ಹೊಂದಿರುವ ವಸತಿ ಶಾಲೆಗಳು ಎಷ್ಟು ?

## ರಾಯಚೂರು ಜಿಲ್ಲೆಯಲ್ಲಿರುವ ವಕ್ಫ್ ಆಸ್ತಿಗಳ ಬಗ್ಗೆ

ಶ್ರೀ ಎನ್.ಎಸ್. ಬೋಸ್‌ರಾಜ್ (ವಿಧಾನಸಭೆಯಿಂದ ಚುನಾಯಿತರಾದವರು):-

೨೭೬(೩೯೧) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ನಗರದಲ್ಲಿ ಇರುವ ವಕ್ಫ್‌ಗೆ ಸೇರಿರುವ ಒಟ್ಟು ಆಸ್ತಿ ಎಷ್ಟು ; ಸದರಿ ವಕ್ಫ್ ಸೇರಿರುವ ಆಸ್ತಿಯನ್ನು ರಕ್ಷಣೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ವಕ್ಫ್ ಅಧೀನದಲ್ಲಿ ಬರುವ ರಾಯಚೂರು ಈದ್ಗಾ ಮೈದಾನವನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯಲ್ಲಿ ವಕ್ಫ್ ಅಧೀನದಲ್ಲಿ ಬರುವ ಆಸ್ಪತ್ರೆಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಪ್ರವಾಸೋದ್ಯಮ ಇಲಾಖೆಯಿಂದ ಮಂಜೂರಾಗಿರುವ ಯೋಜನೆಗಳ ಬಗ್ಗೆ

ಶ್ರೀ ಎನ್.ಎಸ್. ಬೋಸ್‌ರಾಜ್ (ವಿಧಾನಸಭೆಯಿಂದ ಚುನಾಯಿತರಾದವರು):–

೨೭೭(೩೯೨) ಮಾನ್ಯ ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

೨೦೧೯–೨೦ನೇ ಸಾಲಿನಲ್ಲಿ ರಾಂಯುಚೂರು ಜಿಲ್ಲೆಗೆ ಪ್ರವಾಸೋದ್ಯಮ ಇಲಾಖೆಯಿಂದ ಮಂಜೂರಾಗಿರುವ ವಿವಿಧ ಂಯೋಜನೆಗಳು ಂಯಾವುವು ; ಈ ಂಯೋಜನೆಗಳಿಗೆ ಮಂಜೂರಾಗಿರುವ ಅನುದಾನ ಎಷ್ಟು ?

## KSTDC ನಿಗಮದಲ್ಲಿ ಅನುಕಂಪದ ಆಧಾರದ ಮೇಲೆ ಸ್ವೀಕರಿಸಿರುವ ಅರ್ಜಿಗಳ ಕುರಿತು

ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–

೨೭೮ (೪೫೫) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಪ್ರವಾಸೋದ್ಯಮ ನಿಮಗ (KSTDC) ದಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ, ತಿಂಗಳಿಗೆ ಪಡೆಯುತ್ತಿರುವ ಮಾಸಿಕ ವೇತನದೊಂದಿಗೆ ವಿವರವಾದ ಮಾಹಿತಿ ನೀಡುವುದು ;

(ಆ) ಸದರಿ ನಿಗಮದಲ್ಲಿ ಗುತ್ತಿಗೆಯಡಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; ಹೆಸರು, ಹುದ್ದೆಯ ಪದನಾಮ, ತಿಂಗಳಿಗೆ ಪಡೆಯುತ್ತಿರುವ ಮಾಸಿಕ ವೇತನದೊಂದಿಗೆ ವಿವರವಾದ ಮಾಹಿತಿ ನೀಡುವುದು ;

(ಇ) ನಿಗಮದಲ್ಲಿ ಅನುಕಂಪ ಆಧಾರದ ಮೇಲೆ ಕೆಲಸ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಎಷ್ಟು ಜನರಿಗೆ ಉದ್ಯೋಗ ನೀಡಲಾಗಿದೆ ; ಬಾಕಿ ಉಳಿದಿರುವ ಅಭ್ಯರ್ಥಿಗಳೆಷ್ಟು ; ಅರ್ಜಿ ಸಲ್ಲಿಸಿರುವ ದಿನಾಂಕ ಹಾಗೂ ವಿಳಾಸದೊಂದಿಗೆ ಮಾಹಿತಿ ನೀಡುವುದು ;

(ಈ) ಸರ್ಕಾರ ಯಾವ ಕಾಲ ಮಿತಿಯೊಳಗೆ ಈ ನೊಂದ ಕುಟುಂಬಗಳಿಗೆ ನ್ಯಾಯ ದೊರಕಿಸುವುದು ?

## ತಾಲ್ಲೂಕು ಮಟ್ಟಗಳಲ್ಲಿ ಸಾಂಸ್ಕೃತಿಕ ಭವನಗಳ ನಿರ್ಮಾಣ ಕುರಿತು

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೭೯ (೩೫೮) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಸಂಘ ಸಂಸ್ಥೆಗಳು ಮತ್ತು ಕಲಾವಿದರುಗಳು ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸಲು ಅನುಕೂಲವಾಗುವಂತೆ ತಾಲ್ಲೂಕು ಮಟ್ಟಗಳಲ್ಲಿ ಸಾಂಸ್ಕೃತಿಕ ಭವನಗಳನ್ನು ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಸಾಂಸ್ಕೃತಿಕ ಭವನಗಳು ಎಷ್ಟು ಕಡೆ ಇವೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಭವನಗಳು ತಾಲ್ಲೂಕು ಮಟ್ಟಗಳಲ್ಲಿ ಇಲ್ಲದಿದ್ದಲ್ಲಿ, ಅವುಗಳನ್ನು ಯಾವಾಗ ನಿರ್ಮಿಸಲಾಗುವುದು ?

## ಮೈಸೂರಿನಿಂದ ಬೆಳಕವಾಡಿಗೆ ನೇರ ಬಸ್ ಸೌಕರ್ಯ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೮೦ (೪೫೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರಿನಿಂದ ಮಳವಳ್ಳಿ ತಾಲ್ಲೂಕು ಬೆಳಕವಾಡಿಗೆ (ಟೀನರಸೀಪುರದ ಮೂಲಕ) ಮತ್ತು ನಂಜನಗೂಡಿನಿಂದ ಬೆಳಕವಾಡಿಗೆ ಬಸ್‌ಗಳನ್ನು ಓಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ಬೆಳಕವಾಡಿಯಲ್ಲಿ ೨೦,೦೦೦ ಜನಸಂಖ್ಯೆ ಇದ್ದು ಮೈಸೂರಿನಿಂದ ಬೆಳಕವಾಡಿಗೆ ಹಾಗೂ ನಂಜನಗೂಡಿನಿಂದ ಬೆಳಕವಾಡಿಗೆ ಬೆಳಗ್ಗೆ ಮತ್ತು ಸಂಜೆ ಎರಡೆರಡು ಬಸ್ಸುಗಳನ್ನು ಓಡಿಸಲು (ಟೀನರಸೀಪುರದ ಮೂಲಕ) ಎಷ್ಟು ದಿವಸಗಳಲ್ಲಿ ಕ್ರಮ ಕೈಗೊಳ್ಳಲಾಗುವುದು ;

(ಇ) ಬೆಳಕವಾಡಿಯಿಂದ ಮೈಸೂರಿಗೆ ಅಥವಾ ನಂಜನಗೂಡಿಗೆ ಹೋಗಬೇಕಾದರೆ ಕೊಳ್ಳೇಗಾಲಕ್ಕೆ ಅಥವಾ ಮಳವಳ್ಳಿಗೆ ಹೋಗಿ ನಂತರ ಇನ್ನೊಂದು ಬಸ್ಸಿನಲ್ಲಿ ಜನ ಪ್ರಯಾಣ ಮಾಡಬೇಕಾಗಿರುವುದರಿಂದ ನೇರವಾಗಿ ಬಸ್ಸಿನಲ್ಲಿ ಪ್ರಯಾಣ ಮಾಡಲು ಶೀಘ್ರವಾಗಿ ಅನುಕೂಲ ಮಾಡಿಕೊಡಲಾಗುವುದೆ ?

## ತಾಲ್ಲೂಕು ಮಟ್ಟಗಳಲ್ಲಿ ಸಾಂಸ್ಕೃತಿಕ ಕಲಾಭವನಗಳ ನಿರ್ಮಾಣ ಕುರಿತು

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೮೧ (೪೫೭) ಮಾನ್ಯ ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಸಂಘ ಸಂಸ್ಥೆಗಳು ಮತ್ತು ಕಲಾವಿದರುಗಳು ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸಲು ತಾಲ್ಲೂಕು ಮಟ್ಟಗಳಲ್ಲಿ ಸಾಂಸ್ಕೃತಿಕ ಕಲಾಭವನಗಳನ್ನು ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಕಡೆ ಸಾಂಸ್ಕೃತಿಕ ಕಲಾಭವನಗಳಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಒಂದು ವೇಳೆ ತಾಲ್ಲೂಕು ಮಟ್ಟಗಳಲ್ಲಿ ಇಲ್ಲದಿದ್ದರೆ ಯಾವಾಗ ನಿರ್ಮಿಸಲಾಗುವುದು ?

## ಕರ್ನಾಟಕ ಅಲ್ಪಸಂಖ್ಯಾತರ ಆಯೋಗದ ಸದಸ್ಯರನ್ನು ನೇಮಿಸದಿರುವ ಕುರಿತು

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೮೨ (೪೫೮) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರನ್ನು ಮಾತ್ರ ನೇಮಕ ಮಾಡಿದ್ದು, ಸದಸ್ಯರನ್ನು ನೇಮಕ ಮಾಡದಿರಲು ಕಾರಣವೇನು ;

(ಆ) ಸದಸ್ಯರ ನೇಮಕ ಮಾಡದಿರುವುದರಿಂದ ಆಯೋಗದ ಕೆಲಸ–ಕಾರ್ಯಗಳು ಸುಗಮವಾಗಿ ಹಾಗೂ ಪರಿಣಾಮಕಾರಿಯಾಗಿ ನಡೆಯಲು ತೊಂದರೆಯಾಗುವುದಿಲ್ಲವೇ ;

(ಇ) ಎಷ್ಟು ದಿವಸಗಳಲ್ಲಿ ಸದಸ್ಯರನ್ನು ನೇಮಿಸಲಾಗುವುದು ?

## ಶುದ್ಧ ಕುಡಿಯುವ ನೀರು ಘಟಕ ಸ್ಥಾಪನೆ ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–

೨೮೩ (೩೬೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳು ಏನು ; (ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ ; (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಕಳೆದ ೩ ವರ್ಷಗಳ ಅವಧಿಯಲ್ಲಿ ಈ ಘಟಕಗಳ ಸ್ಥಾಪನೆಗೆ ವಿನಿಯೋಗಿಸಲಾದ ಅನುದಾನದ ಪ್ರಮಾಣ ಎಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಈ ಘಟಕಗಳಿಗೆ ಪೂರೈಕೆಯಾಗುತ್ತಿರುವ ನೀರಿನ ಪ್ರಮಾಣ, ನೀರಿನ ಮೂಲ ಕುರಿತು ಸಂಪೂರ್ಣ ಮಾಹಿತಿ ಒದಗಿಸುವುದು ;

(ಉ) ಪ್ರಸ್ತುತ ಈ ಘಟಕಗಳ ಮೂಲಕ ಪೂರೈಕೆಯಾಗುತ್ತಿರುವ ನೀರಿನ ಗುಣಮಟ್ಟದ ಬಗ್ಗೆ ಸರ್ಕಾರ ಗಂಭೀರವಾಗಿ ಆಲೋಚಿಸಿದೆಯೇ ; ಹಾಗಿದ್ದಲ್ಲಿ, ಪ್ರಸ್ತುತ ಅನುಸರಿಸಲಾಗುತ್ತಿರುವ ಕ್ರಮಗಳ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವುದು ?

## ಕನ್ನಡ ಭವನದ ನಿರ್ಲಕ್ಷತನದ ಕುರಿತು

ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೮೪ (೩೧೪) ಮಾನ್ಯ ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನಲ್ಲಿರುವ ಏಕೈಕ ಕನ್ನಡ ಭವನವು ಅಧಿಕಾರಿಗಳ, ನಿರ್ಲಕ್ಷತನದಿಂದ ಪಾಳು ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಜೋಯಿಡಾದಲ್ಲಿರುವ ಕನ್ನಡ ಭವನದಲ್ಲಿ ಯಾವುದೇ ಮೂಲಭೂತ ಸೌಕರ್ಯ ಇಲ್ಲದೇ ಇರುವುದರಿಂದ ಸರ್ಕಾರಿ ಸಭೆ ನಡೆಸಲು ಸಮಸ್ಯೆ ಆಗಿದ್ದು ಹಾಗೂ ಸದರಿ ಭವನದಲ್ಲಿ ಸ್ವಚ್ಛತೆಯ ಕೊರತೆ ಇರುವುದರ ಪ್ರಯುಕ್ತ ಯಾವುದೇ ಕಾರ್ಯಕ್ರಮ ನಡೆಸಲಾರದೇ ಭವನ ಹಾಳಾಗಿದ್ದು ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಇಲ್ಲಿಯವರೆಗೆ ಮಾಡಿರುವ ನಿಷ್ಕಾಳಜಿತನಕ್ಕೆ ಸೂಕ್ತ ಕ್ರಮ ಕೈಗೊಳ್ಳಲಾಗುವುದೇ ; ಮುಂದಿನ ದಿನಗಳಲ್ಲಿ ಸದರಿ ಭವನ ಎಲ್ಲಾ ಸೌಕರ್ಯಗಳಿಂದ ಅನುಕೂಲವಾಗುವ ರೀತಿಯಲ್ಲಿ ಸಿಗುವಂತೆ ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

# ಶುದ್ಧ ನೀರಿನ ಘಟಕ ನಿರ್ವಹಣೆಯಲ್ಲಿ ನಡೆದಿರುವ ಅವ್ಯವಹಾರದ ಕುರಿತು

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೮೫ (೩೧೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಜನತೆಯ ನೀರಿನ ಹಾಹಕಾರ ನಿಲ್ಲಿಸುವ ಸದುದ್ದೇಶದಿಂದ ಸ್ಥಾಪಿಸಲಾದ ಸಾವಿರಾರು ಶುದ್ಧ ಕುಡಿಯುವ ನೀರಿನ ಘಟಕಗಳು ನಿರ್ವಹಣೆ ಇಲ್ಲದೆ ಕೆಟ್ಟು ನಿಂತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಕೆಟ್ಟು ನಿಂತಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ದುರಸ್ಥಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇದರ ನಿರ್ವಹಣೆಯ ಜವಾಬ್ದಾರಿ ಯಾರದು ;

(ಇ) ಕಾರವಾರ ಜಿಲ್ಲೆಯಲ್ಲಿ ಒಟ್ಟು ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ ; ಎಲ್ಲೆಲ್ಲಿ ಹಾಗೂ ಅವು ಯಾವುವು; (ವಿವರ ನೀಡುವುದು)

(ಈ) ಕಾರವಾರ ಜಿಲ್ಲೆಯಲ್ಲಿ ಎಷ್ಟು ತಾಲ್ಲೂಕು ಕೇಂದ್ರಗಳಲ್ಲಿ ನೀರು ಪರೀಕ್ಷಣಾ ಪ್ರಯೋಗಾಲಯಗಳನ್ನು Laboratory ಸ್ಥಾಪಿಸಲಾಗಿದೆ ; ಈ ಪ್ರಯೋಗಾಲಯದ ಪ್ರತಿ ಕೇಂದ್ರಕ್ಕೆ ಎಷ್ಟು ಹಣ ಖರ್ಚು ಮಾಡಲಾಗಿದೆ ; (ವಿವರ ನೀಡುವುದು)

(ಉ) ತಾಲ್ಲೂಕು ಕೇಂದ್ರಗಳಲ್ಲಿ ಸ್ಥಾಪಿಸಲಾದ ಪ್ರಯೋಗಾಲಯಗಳಲ್ಲಿ ಎಷ್ಟು ದುರಸ್ಥಿಯಲ್ಲಿವೆ ; ಇವುಗಳ ಸ್ಥಿತಿಗಳ ಬಗ್ಗೆ ವಿವರವಾದ ಮಾಹಿತಿಯನ್ನು ಒದಗಿಸುವುದು ?

## ಅಭಿವೃದ್ಧಿ ಕಾಮಗಾರಿಗಳಲ್ಲಿ ಅವ್ಯವಹಾರದ ಬಗ್ಗೆ ತನಿಖೆ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

**೨೮೬ (೩೧೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–**

**(ಅ) ರಾಜ್ಯದಲ್ಲಿ ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮದಿಂದ ೨೦೧೫–೧೬ನೇ ಸಾಲಿನಿಂದ ೨೦೧೯–೨೦ನೇ ಸಾಲಿನವರೆಗೆ ಯಾವ ಯಾವ ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ಮಂಜೂರು ಮಾಡಲಾಗಿದೆ ; ಸದರಿ ಅವಧಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವ್ಯವಸ್ಥಾಪಕ ನಿರ್ದೇಶಕರ ಹೆಸರು ಮತ್ತು ಹುದ್ದೆ ಬಿಡುಗಡೆ ಮಾಡಿದ ಅನುದಾನ ಶೀರ್ಷಿಕೆವಾರು, ಜಿಲ್ಲಾವಾರು, ತಾಲ್ಲೂಕುವಾರು, ಮಾಹಿತಿ ನೀಡುವುದು ;**

**(ಆ) ಸದರಿ ಕೆ.ಆರ್.ಐ.ಡಿ.ಎಲ್. ರವರು ಸಾವಿರಾರು ಕೋಟಿ ಮೊತ್ತದ ಕಾಮಗಾರಿ ನಡೆಸುವಷ್ಟು ತಜ್ಞ ಸಿಬ್ಬಂದಿ ನಿಗಮದ ಬಳಿ ಇಲ್ಲದಿರುವುದರಿಂದ, ಈಗಾಗಲೇ ನಿಗಮಕ್ಕೆ ಮಂಜೂರು ಮಾಡಿರುವ ಅನುದಾನದಲ್ಲಿ ಸರಿಯಾದ ಕಾಮಗಾರಿ ಮಾಡಿಸದೆ ದುರುಪಯೋಗ ಮಾಡಿರುವ ಕುರಿತು ತನಿಖೆ ಮಾಡಿ ಸಂಬಂಧಿಸಿದವರ ಮೇಲೆ ಸೂಕ್ತ ಕ್ರಮ ಕೈಗೊಳ್ಳುವುದೇ ;**

**(ಇ) ಸದರಿ ಕೆ.ಆರ್.ಐ.ಡಿ.ಎಲ್. ರವರಲ್ಲಿ ಟೆಂಡರ್ ಕರೆದು ಗುತ್ತಿಗೆ ನೀಡಿದಾಗ ಕಾಮಗಾರಿ ಮುಗಿದ ಮೇಲೂ ೨ವರ್ಷ ನಿರ್ವಹಣೆ ಮಾಡುವ ಹೊಣೆ ಗುತ್ತಿಗೆದಾರರ ಮೇಲೆ ಇದ್ದು ಸದರಿ ನಿಗಮಕ್ಕೆ ಇದು ಅನ್ವಯಿಸುತ್ತದೆಯೇ ? (ವಿವರ ನೀಡುವುದು)**

## ಭಾಗ್ಯಲಕ್ಷ್ಮಿ ಬಾಂಡ್ ಯೋಜನೆ ಬಗ್ಗೆ

ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೮೭ (೩೧೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಸರ್ಕಾರದ ಭಾಗ್ಯಲಕ್ಷ್ಮಿ ಬಾಂಡ್ ಯೋಜನೆಯು ಎಂದಿನಿಂದ ಜಾರಿಗೆ ಬಂದಿರುತ್ತದೆ ; ಹಾಗೂ ಆ ಯೋಜನೆಯಡಿ ೨೦೧೭–೧೮ ರಿಂದ ೨೦೧೯–೨೦ನೇ ಸಾಲಿನವರೆಗೆ ಎಷ್ಟು ಹೆಣ್ಣು ಮಕ್ಕಳಿಗೆ ಬಾಂಡ್ ವಿತರಿಸಲಾಗಿದೆ ; (ಜಿಲ್ಲಾವಾರು/ತಾಲ್ಲೂಕುವಾರು ವಿವರ ನೀಡುವುದು)

(ಆ) ಹಿಂದಿನ ೩ ವರ್ಷಗಳಲ್ಲಿ ಭಾಗ್ಯಲಕ್ಷ್ಮಿ ಬಾಂಡ್‌ನ್ನು ಪಡೆದ ಹೆಣ್ಣು ಮಕ್ಕಳ ಸಂಖ್ಯೆ ಎಷ್ಟು ; ಇದಕ್ಕೆ ತಗುಲಿದ ವೆಚ್ಚ ಎಷ್ಟು ; (ವರ್ಷವಾರು ವಿವರ ನೀಡುವುದು)

(ಇ) ೨೦೧೯–೨೦ನೇ ಸಾಲಿನ ಯೋಜನೆಗೆ ಆಯುವ್ಯಯದಲ್ಲಿ ಮೀಸಲಿರಿಸಿರುವ ಅನುದಾನ ಎಷ್ಟು ಪ್ರಸ್ತುತ ಖರ್ಚಾಗಿರುವ ವೆಚ್ಚವೆಷ್ಟು ? (ತಾಲ್ಲೂಕುವಾರು/ಜಿಲ್ಲಾವಾರು ವಿವರ ನೀಡುವುದು)

## ವಿವಿಧ ಸಂಘ ಸಂಸ್ಥೆಗಳಿಗೆ ಅನುದಾನ ನೀಡಿದ ಬಗ್ಗೆ

ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೮೮ (೩೪೯) ಮಾನ್ಯ ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಕಳೆದ ೫ ವರ್ಷಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಯಾವ ಯಾವ ಸಂಘ ಸಂಸ್ಥೆಗಳಿಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ; (ಅನುದಾನ ಮಂಜೂರು ಮಾಡಲು ಶಿಫಾರಸ್ಸು ಮಾಡಿರುವವರ ಮಾಹಿತಿಯನ್ನು ತಾಲ್ಲೂಕುವಾರು/ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇಲಾಖೆ ವತಿಯಿಂದ ಸಂಘ ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಲು ಇರುವ ನಿಯಮಗಳೇನು ;

(ಇ) ಸದರಿ ನಿಯಮಾವಳಿಗಳನ್ನು ಪಾಲಿಸದಿರುವ ಸಂಘ ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ನಿಯಮಾವಳಿಗಳನ್ನು ಪಾಲಿಸದೆ ಅನುದಾನ ಪಡೆದಿರುವ ಸಂಘ ಸಂಸ್ಥೆಗಳು ಯಾವುವು ; ಪಡೆದಿರುವ ಅನುದಾನ ಎಷ್ಟು ; (ಕಳೆದ ೫ ವರ್ಷಗಳಲ್ಲಿ ಸಂಪೂರ್ಣ ವಿವರ ನೀಡುವುದು)

(ಈ) ಈ ಪ್ರಕರಣದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ನಿಯಮಾವಳಿಗಳನ್ನು ಪಾಲಿಸದಿರುವ ಸಂಘ ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಿದ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು ?

## ಗ್ರಾಮ ಪಂಚಾಯಿತಿಗಳಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೮೯ (೩೨೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯಲ್ಲಿರುವ ಗ್ರಾಮ ಪಂಚಾಯಿತಿಗಳಿಗೆ ಕಳೆದ ೩ ವರ್ಷಗಳಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಆ) ಸರ್ಕಾರದ ಯಾವ ಯಾವ ಕಾರ್ಯಕ್ರಮ/ಯೋಜನೆಗಳನ್ನು ಗ್ರಾಮ ಪಂಚಾಯಿತಿಗಳ ಮೂಲಕ ಜಾರಿಗೆ ಬರುತ್ತಿವೆ ; ಈ ಕಾರ್ಯಕ್ರಮ/ಯೋಜನೆಗಳಿಗಾಗಿ ಕಳೆದ ೩ ವರ್ಷಗಳಲ್ಲಿ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಇದರಲ್ಲಿ ಖರ್ಚಾದ ಅನುದಾನವೆಷ್ಟು ; (ಫಲಾನುಭವಿ ವಿವರಗಳೊಂದಿಗೆ ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಈ ಗ್ರಾಮ ಪಂಚಾಯಿತಿಗಳು ಕರಗಳ ರೂಪದಲ್ಲಿ ಸಾರ್ವಜನಿಕರಿಂದ ಸ್ವೀಕರಿಸಿರುವ ಆದಾಯವೆಷ್ಟು ; ಈ ಆದಾಯವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ ; ಗ್ರಾಮ ಪಂಚಾಯಿತಿವಾರು ವಿವರ ನೀಡುವುದು ;

(ಈ) ಹಾಸನ ಜಿಲ್ಲೆಯ ಯಾವ ಗ್ರಾಮ ಪಂಚಾಯಿತಿಗಳು ಸ್ವಂತ ಕಟ್ಟಡಗಳನ್ನು ಹೊಂದಿವೆ ; ಯಾವ ಗ್ರಾಮ ಪಂಚಾಯಿತಿಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ಮತ್ತು ಇದಕ್ಕೆ ಪಾವತಿಸುತ್ತಿರುವ ಬಾಡಿಗೆ ಮೊತ್ತವೆಷ್ಟು ; ಗ್ರಾಮ ಪಂಚಾಯಿತಿವಾರು ವಿವರ ನೀಡುವುದು ?

## ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಕೈಗೊಂಡಿರುವ ಕ್ರಮಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೯೦ (೩೨೬) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಹಾಸನ ಜಿಲ್ಲೆಗೆ ವಿವಿಧ ಯೋಜನೆಗಳಡಿ ಮಂಜೂರಾದ ಅನುದಾನವೆಷ್ಟು ; ಇದರಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಯಾಗದೇ ಬಾಕಿ ಉಳಿದಿರುವ ಅನುದಾನವೆಷ್ಟು ; ಬಾಕಿ ಉಳಿಯಲು ಕಾರಣಗಳೇನು ; ಯಾವಾಗ ಬಿಡುಗಡೆ ಮಾಡಲಾಗುವುದು ; (ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳ ಮೊತ್ತವೆಷ್ಟು ; ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು ; (ಕಾಮಗಾರಿ ಹೆಸರು, ಗ್ರಾಮ ಮತ್ತು ತಾಲ್ಲೂಕಿನ ವಿವರ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಮೂಲಭೂತ ಸೌಲಭ್ಯಗಳಿಲ್ಲದೆ ಅವರು ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಲ್ಪಸಂಖ್ಯಾತರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಪ್ರವಾಸೋದ್ಯಮ ಅಭಿವೃದ್ಧಿ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೯೧ (೩೨೮) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು ;

(ಆ) ಹಾಸನ ಜಿಲ್ಲೆಯಲ್ಲಿ ಪ್ರವಾಸಿಗರು ಉಳಿದುಕೊಳ್ಳಲು ಇಲಾಖೆ ವತಿಯಿಂದ ಎಷ್ಟು ಯಾತ್ರಿ ನಿವಾಸಗಳನ್ನು ನಿರ್ಮಿಸಲಾಗಿದೆ; (ವಿವರ ನೀಡುವುದು)

(ಇ) ಟೂರಿಸ್ಟ್ ಟ್ಯಾಕ್ಸಿಗೆ ನೀಡಲಾಗುತ್ತಿರುವ ಸಹಾಯಧನದ ಮೊತ್ತವೆಷ್ಟು; ಅನುಸರಿಸುತ್ತಿರುವ ಮಾನದಂಡಗಳೇನು ;

(ಈ) ಕಳೆದ ೩ ವರ್ಷಗಳಿಂದ ಹಾಸನ ಜಿಲ್ಲೆಯಲ್ಲಿ ಎಷ್ಟು ಜನ ನಿರುದ್ಯೋಗಿ ಯುವಕರಿಗೆ ಟೂರಿಸ್ಟ್ ಟ್ಯಾಕ್ಸಿ ಸೌಲಭ್ಯವನ್ನು ನೀಡಲಾಗಿದೆ? (ವಿವರಗಳನ್ನು ನೀಡುವುದು)

## ಕ್ರೀಡಾಂಗಣಗಳ ನಿರ್ಮಾಣದ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೨೯೨ (೩೨೯) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ವಿಭಾಗದಲ್ಲಿ ಎಷ್ಟು ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ; ಈ ಕ್ರೀಡಾಂಗಣಗಳ ಅಭಿವೃದ್ಧಿಗಾಗಿ ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ತಾಲ್ಲೂಕು ಮಟ್ಟದಲ್ಲಿ ಒಳಾಂಗಣ ಕ್ರೀಡಾಂಗಣ ಮತ್ತು ಈಜುಕೊಳಗಳನ್ನು ನಿರ್ಮಿಸಲು ಸರ್ಕಾರ ಮುಂದಾಗುವುದೇ ;

(ಇ) ಹಾಗಿದ್ದಲ್ಲಿ, ಸದರಿ ಕ್ರೀಡಾಂಗಣಗಳ ನಿರ್ಮಾಣಕ್ಕೆ ಎಷ್ಟು ಅನುದಾನವನ್ನು ಒದಗಿಸಲಾಗುವುದು; ಯಾವ ಕಾಲಮಿತಿಯೊಳಗೆ ಸದರಿ ಕ್ರೀಡಾಂಗಣಗಳನ್ನು ನಿರ್ಮಿಸಲಾಗುವುದು; ಯಾವ ಯಾವ ತಾಲ್ಲೂಕುಗಳಲ್ಲಿ ನಿರ್ಮಾಣ ಮಾಡಲಾಗುವುದು ? (ವಿವರ ನೀಡುವುದು)

## ಪಶು ವೈದ್ಯಕೀಯ ಆಸ್ಪತ್ರೆಗಳ ಸಿಬ್ಬಂದಿಗಳ ಮಾಹಿತಿ ಕುರಿತು

ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–

೨೯೩ (೩೧೭) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಒಟ್ಟು ಪಶು ವೈದ್ಯಕೀಯ ಆಸ್ಪತ್ರೆಗಳ ಸಂಖ್ಯೆ ಎಷ್ಟು ;

(ಆ) ಜಿಲ್ಲೆಯಲ್ಲಿರುವ ಆಸ್ಪತ್ರೆಗೆ ಮಂಜೂರಾದ ಒಟ್ಟು ಸಿಬ್ಬಂದಿ ವರ್ಗ ಎಷ್ಟು; ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿ ಎಷ್ಟು ? (ಹುದ್ದೆವಾರು ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಅಂಗನವಾಡಿಗಳ ಮಾಹಿತಿ ಕುರಿತು

ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–

೨೯೪ (೩೧೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಅಂಗನವಾಡಿಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಸರ್ಕಾರಿ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳೆಷ್ಟು ;

(ಇ) ಗರಿಷ್ಠ ಹಾಗೂ ಕನಿಷ್ಠ ಮಕ್ಕಳಿರುವ ಅಂಗನವಾಡಿಗಳು ಯಾವುವು ?

## ೨೦೧೯-೨೦ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ ೫೦೫೪ರಲ್ಲಿ ಉಡುಪಿ ಜಿಲ್ಲೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಬಿಡುಗಡೆಯಾದ ಅನುದಾನ ಕುರಿತು ಮಾಹಿತಿ

ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–

೨೯೫ (೩೧೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಅಮವಾಸೆಬೈಲು ಗ್ರಾಮದ ರಸ್ತೆ ಮತ್ತು ಸೇತುವೆಯ ಪುನರ್ ರಚನೆ/ಪುನರ್ ನಿರ್ಮಾಣ ಕಾಮಗಾರಿಗಳ ಕುರಿತಂತೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; (ಸರ್ಕಾರದ ಆದೇಶ ಸಂಖ್ಯೆ:ಗ್ರಾ.ಅ.ಪ/೧೨೩/ ಆರ್.ಆರ್.ಸಿ/೨೦೧೯, ದಿನಾಂಕ:೨೬/೧೧/೨೦೧೯ ಲೆಕ್ಕ ಶೀರ್ಷಿಕೆ:೫೦೫೪-೦೩-೩೩೭-೦-೭೫-೦೫೯ರಡಿಯಲ್ಲಿ )

(ಆ) ಸದರಿ ಅನುದಾನವನ್ನು ಉದ್ದೇಶಿತ ಕಾಮಗಾರಿಗಳಿಗೆ ಬಳಸಲಾಗಿದೆಯೇ ;

(ಇ) ಈ ಕಾಮಗಾರಿಗಳ ಬದಲಾವಣೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; ಸಲ್ಲಿಸಿದ್ದಲ್ಲಿ, ಪ್ರಸ್ತಾವನೆಯ ಪ್ರತಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಈ) ಸದರಿ ಕಾಮಗಾರಿಗೆ ಸಂಬಂಧಿಸಿದಂತೆ ಯಾವುದಾದರು ಆಕ್ಷೇಪಣೆ ಸಲ್ಲಿಸಲಾಗಿದೆಯೇ; (ಮಾಹಿತಿ ನೀಡುವುದು)

(ಉ) ಮೇಲ್ಕಂಡ ಕಾಮಗಾರಿಗೆ ನೀಡಲಾಗಿರುವ ಒಟ್ಟು ಅನುದಾನ ಕುರಿತಂತೆ ಸಂಪೂರ್ಣ ಮಾಹಿತಿ ಒದಗಿಸುವುದು ?

## ಪ್ರವಾಸೋದ್ಯಮ ಇಲಾಖೆಯಿಂದ ಮಂಜೂರಾದ ಕಾಮಗಾರಿಗಳ ಕುರಿತು

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

೨೯೬ (೩೨೦) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೮-೧೯ ಮತ್ತು ೨೦೧೯-೨೦ನೇ ಸಾಲಿನಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಮಂಜೂರಾದ ಕಾಮಗಾರಿಗಳೆಷ್ಟು; ಅನುಷ್ಠಾನಗೊಂಡ ಕಾಮಗಾರಿಗಳೆಷ್ಟು; ಪ್ರಗತಿಯಲ್ಲಿರುವ ಕಾಮಗಾರಿಗಳೆಷ್ಟು ;

(ಆ) ಪ್ರವಾಸೋದ್ಯಮ ಇಲಾಖೆಯಿಂದ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ 'ಯಾತ್ರಿ' ಭವನಗಳ ನಿರ್ವಹಣೆಗಳು ಇಲಾಖೆಯಿಂದ ಮಾಡಲಾಗಿದೆಯೇ; ಇದರಿಂದ ಬರುವ ಆದಾಯ ಎಷ್ಟು ; (ವಿವರ ನೀಡುವುದು)

(ಇ) ಪ್ರವಾಸೋದ್ಯಮ ಇಲಾಖೆಯಿಂದ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ನಿಗಮ ಮಂಡಳಿಗಳು ಲಾಭದಲ್ಲಿ ಇದೆಯೇ; ಇಲ್ಲದ್ದಿದಲ್ಲಿ, ಇದರ ಪುನಃಶ್ಚೇತನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಪ್ರವಾಸೋದ್ಯಮ ಇಲಾಖೆಯ ಕಾಮಗಾರಿಗಳು ಕಳಪೆಮಟ್ಟದಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಕಾಮಗಾರಿ ನಿರ್ವಹಿಸುವ ಏಜೆನ್ಸಿಗಳ ವಿವರ ನೀಡುವುದು ?

## ಮುಖ್ಯ ಮಂತ್ರಿಗಳ ಗ್ರಾಮವಿಕಾಸ ಯೋಜನೆಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೯೭ (೩೨೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ ರಿಂದ ಮುಖ್ಯಮಂತ್ರಿಗಳ ಗ್ರಾಮವಿಕಾಸ ಯೋಜನೆಗಳನ್ನು ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾರಣಗಳೇನು ;

(ಆ) ರಾಜ್ಯದಲ್ಲಿ ೨೦೧೭–೧೮ರಲ್ಲಿ ಗ್ರಾಮವಿಕಾಸ ಯೋಜನೆ ಅನ್ವಯ ಎಷ್ಟು ಗ್ರಾಮಗಳಿಗೆ ಅನುದಾನ ನೀಡಲಾಗಿದೆ; ಇದಕ್ಕೆ ಬಿಡುಗಡೆಗೊಳಿಸಿರುವ ಹಣವೆಷ್ಟು; ಎಲ್ಲಾ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೇ ; (ವಿವರ ನೀಡುವುದು)

(ಇ) ಈ ಯೋಜನೆಗೆ ಕನಿಷ್ಠ ಎರಡು ಲಕ್ಷ ಅನುದಾನ ಒದಗಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ;

(ಈ) ೨೦೧೭-೧೮ರ ಯೋಜನೆಗೆ ಹಣ ಬಿಡುಗಡೆ ಮಾಡದೇ ಕಾಮಗಾರಿಗಳು ವಿಳಂಬಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ೨೦೧೭-೧೮ರಲ್ಲಿ ಬಿಡುಗಡೆ ಮಾಡಿದ ಅನುದಾನವೆಷ್ಟು; ಬಾಕಿ ಇರುವ ಅನುದಾನ ಎಷ್ಟು? (ವಿವರ ನೀಡುವುದು)

## ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೯೮ (೩೨೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅನ್ವಯ ೨೦೧೭-೧೮, ೨೦೧೮-೧೯ ಮತ್ತು ೨೦೧೯-೨೦ರಲ್ಲಿ ಬಿಡುಗಡೆಯಾದ ಅನುದಾನವೆಷ್ಟು; ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲೆಷ್ಟು; ಬಿಡುಗಡೆಯಾದ ಹಣವೆಷ್ಟು; (ವಿವರ ನೀಡುವುದು)

(ಆ) ಕೇಂದ್ರ ಸರ್ಕಾರ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಗೆ ಅನುದಾನ ಕಡಿಮೆ ನೀಡಿರುವುದರಿಂದ ಈ ಉದ್ಯೋಗ ನಿರ್ವಹಿಸಿದವರಿಗೆ ಹಣ ನೀಡಿಲ್ಲ ಎಂಬ ದೂರುಗಳಿದ್ದು, ಪಾವತಿಸಲು ಬಾಕಿ ಇರುವ ಹಣವೆಷ್ಟು; (ವಿವರ ನೀಡುವುದು) ರಾಜ್ಯಾದ್ಯಂತ ಬಾಕಿ ಇರುವ ಹಣವೆಷ್ಟು ; (ವಿವರ ನೀಡುವುದು)

(ಇ) ಉದ್ಯೋಗ ಖಾತರಿ ಯೋಜನೆ ಅನ್ವಯ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳುವ ಅವಕಾಶ ನೀಡಲಾಗಿದೆ; (ವಿವರ ನೀಡುವುದು)

(ಈ) ಈ ಯೋಜನೆ ಅನ್ವಯ ಜಿಲ್ಲೆಯೊಂದರಲ್ಲಿ ಎಷ್ಟು ಮಂದಿಗೆ "ಉದ್ಯೋಗ ಕಾರ್ಡ್" ನೀಡಬೇಕೆಂದು ಷರತ್ತು ಹಾಕಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಉ) ಕಳೆದ ೩ ವರ್ಷಗಳಲ್ಲಿ ಬರಪೀಡಿತ ಪ್ರದೇಶಗಳಲ್ಲಿ ಎಷ್ಟು ಹಣವನ್ನು ಈ ಯೋಜನೆ ಅನ್ವಯ ಖರ್ಚು ಮಾಡಲಾಗಿದೆ? (ವಿವರ ನೀಡುವುದು)

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆಚರಿಸುವ ಜಯಂತಿಗಳು

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–

೨೯ (೩೨೩) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ರಾಜ್ಯದಲ್ಲಿ ವರ್ಷವೊಂದಕ್ಕೆ ಜಯಂತಿಗಳನ್ನು ಸರ್ಕಾರ ಆಚರಿಸುತ್ತಿದೆ; ಇದಕ್ಕೆ ತಗಲುವ ವೆಚ್ಚ ಎಷ್ಟು ;

(ಆ) ೨೦೧೮–೧೯ ಮತ್ತು ೨೦೧೯–೨೦ನೇ ಸಾಲಿನಲ್ಲಿ ಯಾವ ಯಾವ ಜಯಂತಿಗೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ; ಇದರಲ್ಲಿ ಭಾಗವಹಿಸಿದವರ ಸಂಖ್ಯೆ ಎಷ್ಟು ;

(ಇ) ವಿವಿಧ ಜಯಂತಿಗಳ ಆಚರಣೆಯಲ್ಲಿ ಸಾರ್ವಜನಿಕ ಸಹಭಾಗಿತ್ವ ಇಲ್ಲದೇ ಇರುವುದರಿಂದ ಸರ್ಕಾರ ತನ್ನ ಉದ್ದೇಶವನ್ನು ಈಡೇರಿಸುವುದೇ; ಇದರಿಂದಾಗಿ ದುಂದು ವೆಚ್ಚವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದನ್ನು ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಎಲ್ಲಾ ಜಯಂತಿಗಳನ್ನು ರಾಜ್ಯದ ಒಂದು ನಿಗದಿತ ಸ್ಥಳದಲ್ಲಿ ಏರ್ಪಡಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ?

## ಸಾರಿಗೆ ಇಲಾಖೆಗೆ ಈ ಹಿಂದೆ ಘೋಷಿಸಿರುವ ಆಯವ್ಯಯದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೦೦ (೩೨೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಪ್ರಾದೇಶಿಕ ಸಾರಿಗೆ ಇಲಾಖೆಗಳ ವ್ಯಾಪ್ತಿಯಲ್ಲಿ ಈ ಹಿಂದೆ ಆಯವ್ಯಯದಲ್ಲಿ ಘೋಷಿಸಲಾದ ಯೋಜನೆಗಳನ್ನು ಇನ್ನೂ ಅನುಷ್ಠಾನಗೊಳಿಸದಿರಲು ಕಾರಣವೇನು; (ವಿವರ ನೀಡುವುದು)

(ಆ) ಪ್ರಾದೇಶಿಕ ಸಾರಿಗೆ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆಯಿಂದ "ಏಜೆಂಟರ್‌ಗಳೇ" ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸಾರಿಗೆ ಇಲಾಖೆಯಿಂದ ವಾರ್ಷಿಕ ಸರ್ಕಾರಕ್ಕೆ ಬರುವ ಆದಾಯವೆಷ್ಟು ; (ವಿವರ ಒದಗಿಸುವುದು)

(ಈ) ಮಂಗಳೂರು ನಗರದಲ್ಲಿರುವ ಪ್ರಾದೇಶಿಕ ಸಾರಿಗೆ ಅಧಿಕಾರಿಯವರ ಕಛೇರಿ ಮತ್ತು ಇತರ ಕಛೇರಿಗಳನ್ನು ನಗರದ ಹೊರವಲಯಕ್ಕೆ ಸ್ಥಳಾಂತರಿಸಲು ನಿರ್ಣಯಿಸಲಾಗಿದ್ದರೂ ಕ್ರಮ ಕೈಗೊಳ್ಳದೇ ಇರಲು ಕಾರಣವೇನು ? (ವಿವರ ಒದಗಿಸುವುದು)

## ರಾಜ್ಯದಲ್ಲಿ ಹೆಚ್ಚಾಗುತ್ತಿರುವ ಬಾಲ್ಯವಿವಾಹಗಳ ಬಗ್ಗೆ

**ಡಾ॥ ಜಯ ಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೩೦೧ (೪೭೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಎಷ್ಟು ಬಾಲ್ಯವಿವಾಹಗಳಾಗಿವೆ; (ಜಿಲ್ಲಾವಾರು ವಿವರ ನೀಡುವುದು) ಎಷ್ಟು ಪ್ರಕರಣಗಳು ಈ ಕುರಿತು ದಾಖಲಾಗಿವೆ; ಎಷ್ಟು ಜನರಿಗೆ ಈ ಕಾಯ್ದೆಯಡಿ ಕಾನೂನು ಕ್ರಮ ಜರುಗಿಸಲಾಗಿದೆ; (ವಿವರ ನೀಡುವುದು) ಎಷ್ಟು ಹೆಣ್ಣು ಮಕ್ಕಳನ್ನು ಬಾಲ್ಯವಿವಾಹಕ್ಕೆ ಒಳಗಾಗುತ್ತಿರುವ ಸಂದರ್ಭದಲ್ಲಿ ರಕ್ಷಿಸಲಾಗಿದೆ; ಮತ್ತು ಅವರ ಮುಂದಿನ ಜೀವನ ಮಟ್ಟಕ್ಕೆ ಏನು ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು) ಜಿಲ್ಲಾ ಮಟ್ಟದ ಸಮೀಕ್ಷೆಯನ್ನು ಎಲ್ಲಿಯವರೆವಿಗೆ ನಡೆಸಲಾಗಿದೆ ;

(ಆ) ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನಲ್ಲಿ ಇಲ್ಲಿಯವರೆಗೆ ಆದ ಬಾಲ್ಯವಿವಾಹಗಳೆಷ್ಟು; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಇ) ಬಾಲ್ಯವಿವಾಹಗಳನ್ನು ಮಾಡಿದ ಎಷ್ಟು ಪಾಲಕರು ಮತ್ತು ಸಂಬಂಧಿಸಿದ ವ್ಯಕ್ತಿಗಳ/ಅರ್ಚಕರ ಮೇಲೆ ಪ್ರಕರಣ ದಾಖಲಿಸಲಾಗಿದೆ; ಹಾಗೂ ಎಷ್ಟು ಜನರಿಗೆ ಶಿಕ್ಷೆ ವಿಧಿಸಲಾಗಿದೆ? (ವಿವರ ನೀಡುವುದು)

## ಅನಧಿಕೃತ ಬಸ್ಸುಗಳು ಪರ್ಮಿಟ್ ಇಲ್ಲದೇ ಚಾಲನೆ ಮಾಡುತ್ತಿರುವ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೩೦೨ (೪೭೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಬಸ್ ಡಿಪೋಗಳಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಎಷ್ಟು ಖಾಸಗಿ ಬಸ್ಸುಗಳು ಸಾರಿಗೆ ಅನುಮತಿ ಪಡೆದು ಓಡಾಡುತ್ತಿವೆ; ಅನಧಿಕೃತ ಬಸ್ಸುಗಳು ಪರ್ಮಿಟ್ ಇಲ್ಲದೆ ಚಾಲನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇವುಗಳ ನಿಗ್ರಹಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಪ್ರಸ್ತುತ ವರ್ಷದಲ್ಲಿ ಹೊಸ ಬಸ್ಸುಗಳನ್ನು ಖರೀದಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ;

(ಈ) ಬೆಂಗಳೂರಿನಲ್ಲಿ ಮೆಟ್ರೋ ರೈಲು ಯೋಜನೆಯು ಯಶಸ್ವಿಯಾಗಿ ಕಾರ್ಯ ನಿರ್ವಹಿಸುತ್ತಿರುವುದರಿಂದ ಸರ್ಕಾರವು ಎಷ್ಟು ಬಸ್ಸುಗಳನ್ನು ಕಡಿತಗೊಳಿಸಿದೆ ?

## ರಾಜ್ಯ ಸರ್ಕಾರದಲ್ಲಿರುವ ಬಸ್ಸುಗಳ ಕುರಿತು

ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–

೩೦೩ (೪೭೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸಾರಿಗೆ ಇಲಾಖೆಯಲ್ಲಿ (ಎಲ್ಲಾ ನಿಗಮಗಳೂ ಸೇರಿ) ನಿಷ್ಕ್ರೀಯಗೊಂಡಿರುವ ಬಸ್ಸುಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ರಾಜ್ಯ ಸಾರಿಗೆ ಇಲಾಖೆಯು ಕಳೆದ ೦೩ ವರ್ಷಗಳಲ್ಲಿ ನಿಷ್ಕ್ರೀಯಗೊಂಡಿರುವ ಎಷ್ಟು ಬಸ್ಸುಗಳನ್ನು ಹರಾಜು ಮೂಲಕ ವಿಲೇವಾರಿ ಮಾಡಲಾಗಿದೆ ;

(ಇ) ಬಸ್ಸುಗಳನ್ನು ನಿಷ್ಕ್ರೀಯ ಎಂದು ಘೋಷಿಸಲು ರಾಜ್ಯ ಸಾರಿಗೆ ಇಲಾಖೆ ಯಾವ ಮಾನದಂಡಗಳನ್ನು ಅನುಸರಿಸುತ್ತಿದೆ?

## ರಾಜ್ಯದಲ್ಲಿರುವ ಕ್ರೀಡಾ ಶಾಲೆಗಳ ಕುರಿತು

ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–

೩೦೪ (೪೭೪) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಕ್ರೀಡಾ ಶಾಲೆಗಳಿವೆ; ಯಾವ ಯಾವ ರೀತಿಯ ಕ್ರೀಡೆಗಳಿಗೆ ತರಬೇತಿ ನೀಡಲಾಗುತ್ತಿದೆ;

(ಆ) ಗ್ರಾಮೀಣ ಭಾಗದ ಯುವಕ/ಯುವತಿಯರಿಗೆ ಪ್ರತ್ಯೇಕವಾಗಿ ಸರ್ಕಾರದಿಂದ ಯಾವುದಾದರೂ ಯೋಜನೆಗಳಿವೆಯೇ;

(ಇ) ೨೦೧೯–೨೦ನೇ ಸಾಲಿಗೆ ಹೊಸದಾಗಿ ಎಷ್ಟು ಕ್ರೀಡಾ ಶಾಲೆಗಳನ್ನು ತೆರೆಯಲು ಸರ್ಕಾರ ಚಿಂತನೆ ಮಾಡಿದೆ?

## ಸಾರಿಗೆ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೫ (೩೬೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ/ರಾಜ್ಯ ರಸ್ತೆ ಸಾರಿಗೆ ಸಂಸ್ಥೆ/ವಾಯುವ್ಯ/ನೈರುತ್ಯ ಸಾರಿಗೆ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಎಲ್ಲಾ ವೃಂದದ ಹುದ್ದೆಗಳು ಸೇರಿದಂತೆ)

(ಆ) ಕಳೆದ ಒಂದು ವರ್ಷದಲ್ಲಿ ನಿವೃತ್ತಿ ಹೊಂದಿದ ಅಧಿಕಾರಿ/ ನೌಕರರ ಸಂಖ್ಯೆ ಎಷ್ಟು; (ವಿವರವಾದ ಮಾಹಿತಿ ನೀಡುವುದು)

(ಇ) ನಿವೃತ್ತಿ ಹೊಂದಿದ ಎಷ್ಟು ದಿನಗಳೊಳಗಾಗಿ ಇವರಿಗೆ ಬರಬೇಕಾದ ಪಿಂಚಣಿ/ಪಿ.ಎಫ್/ಇತರೆ ಸೌಲಭ್ಯಗಳನ್ನು ನೀಡಲಾಗುವುದು; ಇವರುಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಎಷ್ಟು ಜನ ಅಧಿಕಾರಿಗಳಿಗೆ /ನೌಕರರಿಗೆ ಪಿಂಚಣಿ/ಪಿ.ಎಫ್/ ಇತರೆ ಸೌಲಭ್ಯಗಳನ್ನು ಎಷ್ಟು ತಿಂಗಳಿಂದ ನೀಡಿಲ್ಲ; ಇದಕ್ಕೆ ಕಾರಣವೇನು; (ಸಂಪೂರ್ಣ ವಿವರ ನೀಡುವುದು)

(ಉ) ನಿವೃತ್ತಿ ಹೊಂದಿದ ನೌಕರರಿಗೆ ಎಷ್ಟು ದಿನಗಳೊಳಗಾಗಿ ಸದರಿ ಸೌಲಭ್ಯಗಳನ್ನು ನೀಡಲಾಗುವುದು? (ಸಾರಿಗೆ ಸಂಸ್ಥೆಗಳಿಗೆ ಅನ್ವಯವಾಗುವಂತೆ ಪ್ರತ್ಯೇಕವಾಗಿ ಸ್ಪಷ್ಟ ಸಂಪೂರ್ಣ ವಿವರ ನೀಡುವುದು)

## ಪಶುಪಾಲನೆ ಇಲಾಖೆಯ ಯೋಜನೆಗಳ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೩೦೬ (೩೬೭) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦ನೇ ಸಾಲಿಗೆ ಪಶುಪಾಲನೆ ಇಲಾಖೆಗೆ ಹಂಚಿಕೆ ಮಾಡಿರುವ ಅನುದಾನವೆಷ್ಟು ; ಈ ಅನುದಾನವನ್ನು ರಾಜ್ಯದ ಜಿಲ್ಲೆಗಳಿಗೆ ಯಾವ ಪ್ರಮಾಣದಲ್ಲಿ ಹಂಚಿಕೆ ಮಾಡಲಾಗಿದೆ ; (ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲೆಗೆ ಪಶು ಭಾಗ್ಯ ಯೋಜನೆಯಡಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ;

(ಇ) ಈ ಅನುದಾನದಲ್ಲಿ ೨೦೧೯-೨೦ನೇ ಸಾಲಿನಲ್ಲಿ ಜಿಲ್ಲೆಯ ಫಲಾನುಭವಿಗಳಿಗೆ ಈ ಯೋಜನೆಗಳಲ್ಲಿ ಒದಗಿಸಿರುವ ಸೌಲಭ್ಯಗಳೇನು ; (ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಸದರಿ ಯೋಜನೆಯಡಿ ಫಲಾನುಭವಿಗಳನ್ನು ಗುರುತಿಸಲು ಬಾಕಿ ಇರುವ ಅರ್ಜಿಗಳೆಷ್ಟು ; ಸ್ವೀಕರಿಸಿರುವ ಅರ್ಜಿಗಳನ್ನು ಆಯ್ಕೆ ಮಾಡಿ ಫಲಾನುಭವಿಗಳನ್ನು ಗುರುತಿಸುವುದು ಯಾವಾಗ ? (ವಿವರ ನೀಡುವುದು)

# ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ನಮ್ಮ ಹೊಲ-ನಮ್ಮ ರಸ್ತೆ ಯೋಜನೆ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

**೩೦೭ (೩೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-**

**(ಅ) ರಾಜ್ಯದ ಜಿಲ್ಲೆಗಳಿಗೆ ಗ್ರಾಮೀಣಾಭಿವೃದ್ಧಿ ಇಲಾಖೆ ವತಿಯಿಂದ ನಮ್ಮ ಹೊಲ-ನಮ್ಮ ರಸ್ತೆ ಯೋಜನೆಯಡಿ ೨೦೧೯-೨೦ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)**

**(ಆ) ತುಮಕೂರು ಜಿಲ್ಲೆಗೆ ನೀಡಿರುವ ಅನುದಾನದಲ್ಲಿ ಈ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; (ವಿವರ ಒದಗಿಸುವುದು)**

**(ಇ) ಬಿಡುಗಡೆ ಮಾಡಿದ ಅನುದಾನವನ್ನು ಸಂಪೂರ್ಣವಾಗಿ ಬಳಸಿಕೊಂಡು ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆಯೇ ; ಹಾಗಿದ್ದಲ್ಲಿ, ಪೂರ್ಣಗೊಳಿಸಿದ ಕಾಮಗಾರಿಗಳು ಯಾವುವು ; (ಜಿಲ್ಲೆಯ ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು)**

**(ಈ) ತುಮಕೂರು ಜಿಲ್ಲೆಯಲ್ಲಿ ಈ ಯೋಜನೆಯಡಿ ೨೦೧೯-೨೦೨೦ರ ಮಾರ್ಚ್ ಅಂತ್ಯಕ್ಕೆ ಉಳಿಕೆಯಾಗಿರುವ ಅನುದಾನವೆಷ್ಟು ? (ಮಾಹಿತಿ ನೀಡುವುದು)**

# ಕನ್ನಡ, ಸಂಸ್ಕೃತಿ ಮತ್ತು ಗಡಿ ಅಭಿವೃದ್ಧಿಗೆ ನೀಡಿರುವ ಅನುದಾನದ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೩೦೮ (೩೬೬) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಎರಡು ವರ್ಷಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಗಡಿ ಅಭಿವೃದ್ಧಿ ಮಂಡಳಿಗೆ ನೀಡಲಾಗಿರುವ ಅನುದಾನ ಎಷ್ಟು ; (ಗಡಿವಾರು ಜಿಲ್ಲೆಗಳ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ೨೦೧೮-೧೯ನೇ ಸಾಲಿನ ಆಯ-ವ್ಯಯದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಒದಗಿಸಲಾಗಿರುವ ಅನುದಾನ ಎಷ್ಟು ;

(ಇ) ಒದಗಿಸಿರುವ ಅನುದಾನದಲ್ಲಿ ಇಲ್ಲಿಯ ತನಕ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; (ವಿವರವಾದ ಮಾಹಿತಿಯನ್ನು ನೀಡುವುದು)

(ಈ) ೨೦೧೮-೧೯ನೇ ಸಾಲಿನಲ್ಲಿ ಗಡಿ ಅಭಿವೃದ್ಧಿ ಮಂಡಳಿಗೆ ನೀಡಿರುವ ಅನುದಾನವೆಷ್ಟು ; ಹಾಗೂ ಈ ಅನುದಾನವನ್ನು ಸಮನಾಗಿ ಗಡಿ ಜಿಲ್ಲೆಗಳ ತಾಲ್ಲೂಕುಗಳಿಗೆ ಹಂಚಿಕೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಉ) ಗಡಿ ಅಭಿವೃದ್ಧಿ ಪ್ರದೇಶಗಳಿಗೆ ಅನುದಾನವನ್ನು ನೀಡುವಾಗ ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ನೀಡುವುದು)

(ಊ) ಗಡಿ ಅಭಿವೃದ್ಧಿ ಮಂಡಳಿಯ ಅನುದಾನವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ನೀಡಲು ಅವಕಾಶವಿದೆ ? (ವಿವರ ಒದಗಿಸುವುದು)

## ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ನಿರ್ಮಿಸುವ ಮನೆಗಳ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೦೯ (೪೬೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ನಿರ್ಮಿತವಾಗುವ ಮನೆಗಳು ನಿಗದಿತ ಅವಧಿಯೊಳಗೆ ಪೂರ್ಣವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರೀತಿ ವಿಳಂಬವಾಗಲು ಕಾರಣಗಳೇನು ;

(ಇ) ಬೆಳಗಾವಿ ಜಿಲ್ಲೆಯಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿಯಲ್ಲಿ ಕಳೆದ ಎರಡು ವರ್ಷಗಳ ಅವಧಿಯಲ್ಲಿ ಎಷ್ಟು ಮನೆಗಳು ಮಂಜೂರಾಗಿವೆ ; ಎಷ್ಟು ಮನೆಗಳು ಪೂರ್ಣಗೊಂಡಿವೆ ; ಎಷ್ಟು ಪೂರ್ಣಗೊಳ್ಳಲು ಬಾಕಿ ಇವೆ ; ಬಾಕಿ ಇರಲು ಕಾರಣವೇನು ;

(ಈ) ಕಳೆದ ಎರಡು ವರ್ಷಗಳಲ್ಲಿ ಈ ಯೋಜನೆಯಡಿಯಲ್ಲಿ ಬೆಳಗಾವಿ ಜಿಲ್ಲೆಯ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಹಾಗೂ ನಗರಪಾಲಿಕೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ;

(ಉ) ಇದುವರೆಗೂ ಬಳಕೆಯಾದ ಅನುದಾನವೆಷ್ಟು ಹಾಗೂ ಉಳಿಕೆ ಹಣವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

# ರಾಜ್ಯದ ಮಕ್ಕಳ ಅಪೌಷ್ಠಿಕತೆಯಿಂದ ಬಳಲುತ್ತಿರುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೦ (೪೬೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಕ್ಕಳಲ್ಲಿ ಅಪೌಷ್ಠಿಕತೆ ಪ್ರಮಾಣ ಹೆಚ್ಚಾಗಿ ಮಕ್ಕಳು ಅನಾರೋಗ್ಯಪೀಡಿತರಾಗುತ್ತಿದ್ದು, ಸದ್ಯದ ಪರಿಸ್ಥಿತಿಯಲ್ಲಿ ಶೇ. ೬೦–ರಷ್ಟು ಮಕ್ಕಳು ಅಪೌಷ್ಠಿಕತೆಯಿಂದ ಬಳಲುತ್ತಿದ್ದಾರೆಂಬ ಆತಂಕಕಾರಿ ವಿಷಯ ಪತ್ರಿಕೆಗಳಲ್ಲಿ ವರದಿಯಾಗಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಕ್ಕಳು ಅಪೌಷ್ಠಿಕತೆಯಿಂದ ಬಳಲುತ್ತಿರುವುದಕ್ಕೆ ಮೂಲ ಕಾರಣವೇನು ;

(ಇ) ರಾಜ್ಯದಲ್ಲಿ ಎಷ್ಟು ಮಕ್ಕಳು ಅಪೌಷ್ಠಿಕತೆಯಿಂದ ಬಳಲುತ್ತಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರಾಜ್ಯದ ಮಕ್ಕಳಲ್ಲಿರುವ ಅಪೌಷ್ಠಿಕತೆಯನ್ನು ನಿವಾರಿಸಲು ಸರ್ಕಾರ ಇದುವರೆಗೂ ಯಾವ ಕ್ರಮ ಕೈಗೊಂಡಿದೆ ;

(ಉ) ಅಪೌಷ್ಠಿಕತೆಯನ್ನು ಸಂಪೂರ್ಣವಾಗಿ ತೊರೆದುಹಾಕುವ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಯೋಜನೆಗಳೇನು ? (ಸಂಪೂರ್ಣ ವಿವರ ಒದಗಿಸುವುದು)

## ಪಶು ಆಸ್ಪತ್ರೆಗಳಲ್ಲಿ ಔಷಧಗಳ ಕೊರತೆ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೧೧ (೪೬೭) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪಶುವೈದ್ಯ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಗಳ ಕೊರತೆ ಎದುರಾಗಿರುವುದಾಗಿ ಪತ್ರಿಕೆಗಳಲ್ಲಿ ವರದಿ ಪ್ರಸಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪಶುಸಂಗೋಪನಾ ಇಲಾಖೆಗೆ ಔಷಧಿ ಖರೀದಿ ಮಾಡಲು ಸರ್ಕಾರದಿಂದ ಅನುಮತಿ ನೀಡಲಾಗಿದೆಯೇ ;

(ಇ) ಪಶು ಔಷಧಿಗಳಿಗೆ ಇಡೀ ರಾಜ್ಯದಲ್ಲಿ ಏಕರೂಪ ಬೆಲೆ ನಿಗದಿಪಡಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಈ) ಪಶು ಆಸ್ಪತ್ರೆಗಳಲ್ಲಿ ಔಷಧಗಳ ಕೊರತೆಯಾಗದಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಬಾಲಮಂದಿರಗಳಲ್ಲಿನ ಮಕ್ಕಳ ಸ್ಥಿತಿಗತಿ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೧೨ (೪೬೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಕ್ಕಳ ನ್ಯಾಯ (ಪೋಷಣೆ ಮತ್ತು ರಕ್ಷಣೆ) ಕಾಯ್ದೆ ೨೦೧೫ (ತಿದ್ದುಪಡಿ) ಅನ್ವಯ ಪೋಷಣೆ ಮತ್ತು ರಕ್ಷಣೆಗೆ ಅವಶ್ಯಕವಿರುವ ಮಕ್ಕಳ ಅನುಕೂಲಕ್ಕಾಗಿ ಬಾಲಮಂದಿರಗಳನ್ನು ತೆರೆದಿದ್ದು, ಅದರಲ್ಲಿ

ಮೂಲಭೂತ ಸೌಲಭ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಬಾಲಮಂದಿರಗಳಿಂದ ಓಡಿ ಹೋದ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇಲ್ಲಿಯವರೆಗೆ ಎಷ್ಟು ಮಕ್ಕಳನ್ನು ಬಾಲಮಂದಿರಕ್ಕೆ ಮರಳಿ ಕರೆತರಲಾಗಿದೆ ; ಈ ಮಕ್ಕಳ ಹಕ್ಕುಗಳನ್ನು ಕಾಪಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ಬಾಲಮಂದಿರಗಳಿಂದ ಮಕ್ಕಳು ಓಡಿ ಹೋಗಲು ಕಾರಣಗಳೇನು ; (ವಿವರ ನಿಡುವುದು)

(ಉ) ಸರ್ಕಾರಿ ಬಾಲಮಂದಿರಗಳಲ್ಲಿ ಸೂಕ್ತ ತರಬೇತಿ ಹೊಂದಿದ ಎಲ್ಲಾ ಹಂತದ ಸಿಬ್ಬಂದಿಗಳನ್ನು ನೇಮಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಮಕ್ಕಳ ದತ್ತು ನೀಡುವಿಕೆ ಹಾಗೂ ಅನಾಥಾಲಯಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೩ (೪೬೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಯಾವುದೇ ಮಗು ಅನಾಥವಾಗದೆ ತಂದೆ ತಾಯಿಯ ಪ್ರೀತಿಯ ಆರೈಕೆಯಲ್ಲಿಯೇ ಬೆಳೆಯುಬೇಕೆನ್ನುವ ಮಕ್ಕಳ ಹಕ್ಕುಗಳ ಒಡಂಬಡಿಕೆಯ ಆಶಯಕ್ಕೆ ಅನುಗುಣವಾಗಿ ರಾಜ್ಯದಲ್ಲಿ ಮಕ್ಕಳನ್ನು ದತ್ತು ನೀಡುವುದು ಹಾಗೂ ಅನಾಥಾಲಯ (Foster Care) ದಲ್ಲಿ ಬೆಳೆಸುವುದನ್ನು ಉತ್ತೇಜಿಸಲಾಗುತ್ತಿದೆಯೇ ;

(ಆ) ರಾಜ್ಯದಲ್ಲಿ ಅನಾಥಾಲಯ (Foster Care) ಯೋಜನೆಗೆ ಉತ್ತೇಜನ ನೀಡಲಾಗಿದೆಯೇ ;

(ಇ) ನೀಡಿದ್ದಲ್ಲಿ, ರಾಜ್ಯದಲ್ಲಿ ನೋಂದಾಯಿಸಲಾಗಿರುವ ಅನಾಥಾಲಯ (Foster Care) ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಅನಾಥಾಲಯ (Foster Care) ಗಳಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಗಳ ಕುರಿತು

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

೩೧೪ (೩೯) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೫ ವರ್ಷಗಳಿಂದ ರಾಜ್ಯದಲ್ಲಿ ಜರುಗಿದ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳಗಳ ಸಂಖ್ಯೆ ಎಷ್ಟು ;

(ಆ) ಯಾವ ಯಾವ ಸ್ಥಳಗಳಲ್ಲಿ ಸದರಿ ಸಮ್ಮೇಳನಗಳನ್ನು ನಡೆಸಲಾಗಿದೆ ; (ವಿವರ ನೀಡುವುದು)

(ಇ) ಸದರಿ ಸಾಹಿತ್ಯ ಸಮ್ಮೇಳನಗಳಿಗೆ ಸರ್ಕಾರದಿಂದ ನೀಡಲಾದ ಅನುದಾನದ ಮೊತ್ತವೆಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಈ) ಸದರಿ ಸಾಹಿತ್ಯ ಸಮ್ಮೇಳನಗಳಲ್ಲಿ ಖರ್ಚು ಮಾಡಲಾಗಿರುವ ಒಟ್ಟು ಮೊತ್ತವೆಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಉ) ಈ ಸಮ್ಮೇಳನಗಳಲ್ಲಿ ಖರ್ಚು ಮಾಡಲಾಗಿರುವ ಮೊತ್ತದ ಸಂಬಂಧ ಬಾಕಿ ಇರುವ ಒಟ್ಟು ಮೊತ್ತವೆಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಊ) ಸದರಿ ಬಾಕಿ ಮೊತ್ತವನ್ನು ಬಿಡುಗಡೆಗೊಳಿಸಲು ವಿಳಂಬಕ್ಕೆ ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ಬಾಕಿ ಮೊತ್ತ ಬಿಡುಗಡೆಗೊಳಿಸಲಾಗುವುದು ?

## ಕಾಮಗಾರಿಗೆ ಸಂಬಂಧಿಸಿದಂತೆ ವಿವರ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

೩೧೫ (೪೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುಖ್ಯಮಂತ್ರಿ ಗ್ರಾಮ ವಿಕಾಸ್ ಯೋಜನೆಯಲ್ಲಿ ತುಮಕೂರು ಜಿಲ್ಲೆ, ಚಿಕ್ಕನಾಯಕಹಳ್ಳಿ ತಾಲ್ಲೂಕು, ಮುದ್ದೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಾಲಕಟ್ಟೆ ಗ್ರಾಮಕ್ಕೆ ಯಾವ ವಿಧಾನ ಪರಿಷತ್ ಸದಸ್ಯರ ಅನುದಾನದಲ್ಲಿ ಕಾಮಗಾರಿ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಸದರಿ ಯೋಜನೆಗೆ ಯಾವ ವರ್ಷ ಹಣ ಬಿಡುಗಡೆ ಮಾಡಲಾಗಿದೆ ಮತ್ತು ಸದರಿ ಕಾಮಗಾರಿ ಅಪೂರ್ಣವಾಗಿದ್ದಲ್ಲಿ ಕಾರಣಗಳೇನು ;

(ಇ) ಸದರಿ ಯೋಜನೆಯನ್ವಯ ಅನುಮೋದನೆಗೊಂಡ ಕಾಮಗಾರಿಯನ್ನು ಬದಲಾಯಿಸಲಾಗಿದೆಯೇ ;

(ಈ) ಬದಲಾಯಿಸಿದ್ದಲ್ಲಿ, ರಾಜ್ಯ ಸರ್ಕಾರದ ನಡವಳಿ ಸಂಖ್ಯೆ : ಗ್ರಾಅಪ/೦೯/ ಗ್ರಾವಿಂಯೋ/೨೦೧೭, ದಿನಾಂಕ : ೨೦-೦೬-೨೦೧೭ರನ್ವಯ ಸಂಬಂಧಪಟ್ಟ ವಿಧಾನ ಪರಿಷತ್ ಸದಸ್ಯರ ಒಪ್ಪಿಗೆ ಪಡೆಯಲಾಗಿದೆಯೇ ;

(ಉ) ಸದರಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು ನಿಯಮಾವಳಿಗೆ ವಿರುದ್ಧವಾಗಿ ಕಾಮಗಾರಿ ಬದಲಾಯಿಸಿರುತ್ತಾರೆಯೇ ;

(ಊ) ಹಾಗಿದ್ದಲ್ಲಿ, ಅವರ ಮೇಲೆ ನಿಯಮಾನುಸಾರ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಮಂಡ್ಯ ಜಿಲ್ಲೆಗೆ ಸಂಬಂಧಿಸಿದ ಲೆಕ್ಕ ಶೀರ್ಷಿಕೆ ೩೦೫೪ ಅಡಿ ಕಾಮಗಾರಿಯ ವಿವರ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–

೩೧೬ (೪೦೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭–೨೦೧೮ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆಗೆ ಲೆಕ್ಕ ಶೀರ್ಷಿಕೆ ೩೦೫೪ ಅಡಿಯಲ್ಲಿ (ಗ್ರಾಮೀಣ ರಸ್ತೆಗಳ ದರುಸ್ಥಿ/ನಿರ್ವಹಣೆ) ಮಂಜೂರಾದ ಕಾಮಗಾರಿಗಳ ಸಂಖ್ಯೆ ಎಷ್ಟು ; ಅದರ ಒಟ್ಟು ಮೊತ್ತವೆಷ್ಟು ;

(ಆ) ಸದರಿ ಕಾಮಗಾರಿಯ ಉಸ್ತುವಾರಿಯನ್ನು ಯಾವ ಯಾವ ಸರ್ಕಾರಿ ಅಂಗ ಸಂಸ್ಥೆಗಳಿಂದ ನಿರ್ವಹಿಸಲು ಆದೇಶಿಸಲಾಗಿದೆ ; (ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಇದುವರೆವಿಗೂ ಅನುಮೋದನೆಗೊಂಡ ಎಷ್ಟು ಕಾಮಗಾರಿಗಳಿಗೆ ಎಷ್ಟು ಮೊತ್ತದ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ ; (ಪ್ರತ್ಯೇಕವಾಗಿ ವಿವರ ನೀಡುವುದು)

(ಈ) ಉಳಿಕೆ ಮೊತ್ತವನ್ನು ಬಿಡುಗಡೆ ಮಾಡುವಲ್ಲಿ ವಿಳಂಬ ಉಂಟಾಗಲು ಕಾರಣಗಳೇನು ;

(ಉ) ಯಾವ ಕಾಲಮಿತಿಯಲ್ಲಿ ಉಳಿಕೆ ಮೊತ್ತವನ್ನು ಬಿಡುಗಡೆಗೊಳಿಸಲಾಗುವುದು ?

## ಕರ್ನಾಟಕ ದರ್ಶನ್ ಯೋಜನೆಯಡಿ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಸೌಲಭ್ಯಗಳ ಕುರಿತು

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–

೩೧೭ (೪೦೨) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ದರ್ಶನ್ ಯೋಜನೆಯಡಿ ವಿದ್ಯಾರ್ಥಿಗಳಿಗೆ ಪ್ರವಾಸ ಕಾರ್ಯಕ್ರಮಗಳ ಸೌಲಭ್ಯವನ್ನು ಕಲ್ಪಿಸಲಾಗಿದೆಯೇ ; ಶೈಕ್ಷಣಿಕ ವರ್ಷದ ಯಾವ ತಿಂಗಳಿನಲ್ಲಿ ಅವಕಾಶ ಕಲ್ಪಿಸಲಾಗಿದೆ ;

(ಆ) ಹಾಗಾದರೆ, ಸದರಿ ಯೋಜನೆಯಲ್ಲಿ ಸೌಲಭ್ಯವನ್ನು ಕಲ್ಪಿಸಲು ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ಸರ್ಕಾರಿ ಅನುದಾನಿತ ಹಾಗೂ ಅನುದಾನ ರಹಿತ (ಇಂಗ್ಲೀಷ್ ಹಾಗೂ ಕನ್ನಡ ಮಾಧ್ಯಮ) ಶಾಲಾ ವಿದ್ಯಾರ್ಥಿಗಳಿಗೆ ಸದರಿ ಸೌಲಭ್ಯವನ್ನು ನೀಡಲಾಗುತ್ತಿದೆಯೇ ? (ವಿವರ ನೀಡುವುದು)

## ಕಾಡಶೆಟ್ಟಿಹಳ್ಳಿ ಗ್ರಾಮ, ಹಾನಗಲ್ ತಾಲ್ಲೂಕಿನಲ್ಲಿ ಪಂಚಾಕ್ಷರಿ ಗವಾಯಿಗಳ ಪ್ರಾಧಿಕಾರ ಸ್ಥಾಪಿಸುವ ಬಗ್ಗೆ

ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೧೮ (೫೨೩) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶ್ರೀ ಗಾನಯೋಗಿ ಪಂಚಾಕ್ಷರಿ ಗವಾಯಿಗಳ ಹೆಸರಲ್ಲಿ ಹಾನಗಲ್ ತಾಲ್ಲೂಕು, ಕಾಡಶೆಟ್ಟಿ ಹಳ್ಳಿ ಗ್ರಾಮದಲ್ಲಿ ಪ್ರಾಧಿಕಾರ ಸ್ಥಾಪಿಸುವ ಮನವಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಾಧಿಕಾರ ಸ್ಥಾಪಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ;

(ಇ) ಹೌದಾದರೆ, ಪ್ರಾಧಿಕಾರ ಸ್ಥಾಪಿಸಲು ಸರ್ಕಾರಕ್ಕೆ ಬೇಕಾಗಿರುವ ಕಾಲಾವಕಾಶವೆಷ್ಟು ?

## ಪರಿಸರ ಸ್ನೇಹ ಇ–ಬಸ್ ಬಗ್ಗೆ

ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–

೩೧೯ (೪೫೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ಪರಿಸರ ಸ್ನೇಹಿ ಎಲೆಕ್ಟ್ರಿಕ್ ಬಸ್ (ಇ–ಬಸ್) ಅಳವಡಿಕೆ ವಿಳಂಬಕ್ಕೆ ಕಾರಣ ಏನು ;

(ಆ) ಎಲೆಕ್ಟ್ರಿಕ್ ಬಸ್‌ಗಳ ಸಂಚಾರಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಇ–ಬಸ್‌ಗಳ ಸಂಚಾರ ಮತ್ತು ನಿರ್ವಹಣೆಗೆ ಸೂಕ್ತ ಕ್ರಮ ಕೈಗೊಂಡಿದೆಯೇ ;

(ಈ) ಹೌದಾದರೆ, ಅದರ ವಿವರ ನೀಡುವುದು ಇಲ್ಲವಾದರೆ ಕಾರಣವೇನು ?

## ೨೦೧೯–೨೦ನೇ ಸಾಲಿನ ಕೇಂದ್ರ ಬಜೆಟ್‌ನಲ್ಲಿ ದೊರತ ಅನುದಾನ ಬಳಕೆ ಕುರಿತು

ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–

೩೨೦ (೪೫೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ೨೦೧೯–೨೦ನೇ ಸಾಲಿನ ಕೇಂದ್ರ ಬಜೆಟ್‌ನಲ್ಲಿ ದೊರೆತ ಅನುದಾನ ಪೂರ್ಣ ಪ್ರಮಾಣದಲ್ಲಿ ಬಳಕೆಯಾಗಿಲ್ಲವೆಂದು ಮಾಧ್ಯಮದಲ್ಲಿ ವರದಿಯಾಗಿರುವುದು ನಿಜವೇ ; ಹೌದಾದರೆ ಇದಕ್ಕೆ ಕಾರಣವೇನು ;

(ಆ) ಕಳೆದ ಒಂದು ವರ್ಷದಲ್ಲಿ, ರಾಜ್ಯ ಸರ್ಕಾರದ ಅನುದಾನವು ಸೇರಿದಂತೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ದೊರೆತ ಒಟ್ಟು ಅನುದಾನವೆಷ್ಟು ? (ಬಳಕೆ ವಿವರ ನೀಡುವುದು)

## ಇಲಾಖೆಯಲ್ಲಿ ಮಂಜೂರಾದ ಅರ್ಧದಷ್ಟು ಹುದ್ದೆ ಖಾಲಿ ಇರುವ ಬಗ್ಗೆ

ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–

೩೨೧ (೪೫೨) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶುಸಂಗೋಪನಾ ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳ ಪೈಕಿ ಅರ್ಧದಷ್ಟು ಹುದ್ದೆ ಖಾಲಿ ಇದೆಯೆಂದು ಮಾಧ್ಯಮದಲ್ಲಿ ವರದಿಯಾಗಿರುವುದು ನಿಜವೇ ; ಹೌದಾದರೆ, ಇದಕ್ಕೆ ಕಾರಣವೇನು;

(ಆ) ಭರ್ತಿಯಾದ ಹುದ್ದೆ ಮತ್ತು ಖಾಲಿ ಇರುವ ಹುದ್ದೆಗಳೆಷ್ಟು ; (ವಿವರ ನೀಡುವುದು)

(ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಬಸ್ ಸಂಚಾರಕ್ಕೆ ಪ್ರತ್ಯೇಕ ಪಥದ ಬಗ್ಗೆ

ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

೩೨೨ (೪೫೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಬಸ್ ಸಂಚಾರಕ್ಕೆ ನಿರ್ಮಿಸಲಾಗುತ್ತಿರುವ ಪ್ರತ್ಯೇಕ ಪಥ ಯಶಸ್ವಿಯಾಗಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು;

(ಆ) ರಾಜ್ಯದ ಇತರ ನಗರಗಳಲ್ಲಿಯೂ ಇಂತಹ ಪಥ ಮೀಸಲಿಡುವ ಪ್ರಸ್ತಾಪವಿದೆಯೇ ; ಹಾಗಿದ್ದಲ್ಲಿ, ಅದರ ವಿವರ ನೀಡುವುದು ?

## ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೩೨೩ (೩೫೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಸ್ಥಾಪಿಸಲಾಗಿರುವ ಒಟ್ಟು ಶುದ್ಧ ಕುಡಿಯುವ ನೀರಿನ ಘಟಕಗಳು ಎಷ್ಟು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ಈ ಕುಡಿಯುವ ನೀರಿನ ಘಟಕಗಳನ್ನು ಯಾವ ಖಾಸಗಿ ಕಂಪನಿಗೆ ವಹಿಸಲಾಗಿದೆ ಮತ್ತು ಈ ಯೋಜನೆಯಡಿಯಲ್ಲಿ ಬಿಡುಗಡೆ ಮಾಡಲಾದ ಒಟ್ಟು ಅನುದಾನ ಎಷ್ಟು ; (ಖರ್ಚಾದ ಮತ್ತು ಬಾಕಿ ಉಳಿದಿರುವ ಅನುದಾನದ ಒಟ್ಟು ಮೊತ್ತದ ವಿವರಣೆ ನೀಡುವುದು)

(ಇ) ರಾಜ್ಯಾದ್ಯಂತ ಇಲ್ಲಿಯವರೆಗೆ ಸ್ಥಗಿತಗೊಂಡಿರುವ ಒಟ್ಟು ಶುದ್ಧ ನೀರಿನ ಘಟಕಗಳು ಎಷ್ಟು ; ಇದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ಬಗ್ಗೆ ಕೈಗೊಂಡ ಕ್ರಮಗಳೇನು?

## ವಿವಿಧ ಕಾರ್ಯಕ್ರಮಗಳಿಗೆ ಅನುದಾನ ಬಿಡುಗಡೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೨೪ (೩೫೬) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಯಾವ ಯಾವ ಕಾರ್ಯಕ್ರಮಗಳಿಗೆ ಅನುದಾನ ನೀಡಲಾಗುತ್ತದೆ ;

(ಆ) ಕಳೆದ ಮೂರು ವರ್ಷಗಳಿಂದ ಎಷ್ಟು ಅನುದಾನ ಸರ್ಕಾರದಿಂದ ತಮ್ಮ ಇಲಾಖೆಗೆ ಬಂದಿದೆ ; ಎಷ್ಟು ಹಣವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಮಂಜೂರು ಮಾಡಲಾಗಿದೆ ;

(ಇ) ಕಳೆದ ಸಾಲಿನಲ್ಲಿ ನಡೆಸಲಾದ ಕಾರ್ಯಕ್ರಮಗಳಿಗೆ ಅನುದಾನ ಮಂಜೂರು ಮಾಡಲು ಮನವಿ ಸಲ್ಲಿಸಿದರೂ ಇಲಾಖೆಯಲ್ಲಿ ಅನುದಾನವಿಲ್ಲವೆಂದು ಹೇಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಾದರೆ, ಕಾರ್ಯಕ್ರಮಗಳಿಗೆ ಅನುದಾನ ಮಂಜೂರು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಬಗ್ಗೆ

ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೨೫ (೩೧೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; ಇಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಂಗನವಾಡಿ ಕಾರ್ಯಕರ್ತರ ಸಂಖ್ಯೆ ಎಷ್ಟು ;(ಜಿಲ್ಲಾವಾರು ವಿವರ ನೀಡುವುದು)

(ಇ) ಅಂಗನವಾಡಿ ಕಾರ್ಯಕರ್ತೆಯರಿಗೆ ಸರ್ಕಾರ ನೀಡುತ್ತಿರುವ ಗೌರವಧನ ಎಷ್ಟು ; ಗೌರವಧನದ ಜೊತೆಗೆ ಇನ್ನಿತರೆ ಸೌಲಭ್ಯಗಳು ಯಾವುವು ;

(ಈ) ಅಂಗನವಾಡಿ ಕಾರ್ಯಕರ್ತೆಯರಿಗೆ ಗೌರವಧನ ಹೆಚ್ಚಳ ಮಾಡುವ ಕುರಿತು ಸರ್ಕಾರದ ನಿಲುವೇನು ;

(ಉ) ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನ ಅಂಗನವಾಡಿ ಮತ್ತು ಮಿನಿ ಅಂಗನವಾಡಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಎಷ್ಟು; ಅಂಗನವಾಡಿಗಳಿಗೆ ಸ್ವಂತ ಕಟ್ಟಡವಿರುತ್ತದೆ ; ಸ್ವಂತ ಕಟ್ಟಡವಿಲ್ಲದ ಅಂಗನವಾಡಿಗೆ ಹೊಸ ಕಟ್ಟಡಗಳನ್ನು ಕಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ಪ್ರತಿ ವರ್ಷ ಡಿಸೆಂಬರ್ ೩ ರಂದು ಅಂಗವಿಕಲರ ದಿನಾಚರಣೆಯನ್ನು ಆಚರಿಸುವ ಕುರಿತು

ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೨೬ (೩೧೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರತಿ ವರ್ಷ ಡಿಸೆಂಬರ್ ೩ ರಂದು ಅಂಗವಿಕಲರ ದಿನಾಚರಣೆಯನ್ನು ಸರ್ಕಾರ ಆಚರಿಸುತ್ತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಅಂಗವಿಕಲರುಗಳು ಅನೇಕ ಸವಲತ್ತುಗಳನ್ನು ಪಡೆಯಲು ಸರ್ಕಾರದ ನೀತಿ ನಿಯಮಗಳು ಅಡ್ಡಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಇ) ಅಂಗವಿಕಲರ ಮಾಸಿಕ ಪಿಂಚಣಿ ಪಡೆಯಲು ಪೋಷಕರ ವಾರ್ಷಿಕ ವರಮಾನ ₹. ೧೧.೫೦೦ ಕ್ಕೆ ನಿಗಧಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದು ಇಂದಿನ ಕಾಲಕ್ಕೆ ಪ್ರಸ್ತುತವೇ ; ಸರ್ಕಾರ ಅಂಗವಿಕಲರ ನೆರವಿಗೆ ಯಾವ ರೀತಿ ಕಾರ್ಯಕ್ರಮ ರೂಪಿಸಿದೆ ; (ವಿವರ ನೀಡುವುದು)

(ಈ) ಪೋಷಕರ ವರಮಾನದ ಮಿತಿ ಏರಿಕೆಯಾಗದೇ ಯಾವುದೇ ಸವಲತ್ತುಗಳ ಫಲ ಪಡೆಯಲು ಅಂಗವಿಕಲರಿಗೆ ಸಾಧ್ಯವಾಗದಿರುವುದರಿಂದ ಸರ್ಕಾರ ಈ ಬಗ್ಗೆ ತಕ್ಷಣ ಕ್ರಮ ಕೈಗೊಳ್ಳುವುದೇ ?

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು

ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೨೭ (೩೩೧) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಯಾವುವು ;

(ಆ) ಸದರಿ ಯೋಜನೆಗಳಿಗೆ ಕಳೆದ ಎರಡು ವರ್ಷಗಳಲ್ಲಿ ಕಾಯ್ದಿರಿಸಿದ, ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನ ಎಷ್ಟು ? (ವರ್ಷವಾರು, ಯೋಜನೆವಾರು ವಿವರ ನೀಡುವುದು)

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪ್ರತಿ ತಿಂಗಳು ಕಲಾವಿದರ ಮಾಸಾಶನ ಪಡೆಯುವ ಬಗ್ಗೆ

ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೨೮ (೩೩೨) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪ್ರತಿ ತಿಂಗಳು ಕಲಾವಿದರ ಮಾಶಾಶನ ಪಡೆಯಲು ಇರುವ ಮಾನದಂಡಗಳೇನು ; ಇದರ ಮೊತ್ತವೆಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಆ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆ, ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳ ವ್ಯಾಪ್ತಿಯಲ್ಲಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಪ್ರತಿ ತಿಂಗಳು ಮಾಸಾಶನ ಪಡೆಯುತ್ತಿರುವ ಒಟ್ಟು ಕಲಾವಿದರ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಕಲಾವಿದರ ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯ ಪ್ರವಾಸೋದ್ಯಮ ಇಲಾಖೆಯ ಪ್ರವಾಸಿ ತಾಣಗಳ ಬಗ್ಗೆ

ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–

೩೨೯ (೪೬೪) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಪ್ರವಾಸಿ ತಾಣಗಳಾವುವು ; (ತಾಲ್ಲೂಕುವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೨ ವರ್ಷಗಳಿಂದ ಪ್ರವಾಸೋದ್ಯಮ ಇಲಾಖೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನದ ವಿವರ ನೀಡುವುದು;

(ಇ) ಪ್ರವಾಸಿ ತಾಣವನ್ನು ಪ್ರಚಾರ ಪಡಿಸಲು ಸರ್ಕಾರ ರೂಪಿಸಿರುವ ಯೋಜನೆಗಳಾವುವು ? (ತಾಲ್ಲೂಕುವಾರು ಮತ್ತು ಜಿಲ್ಲಾವಾರು ವಿವರ ನೀಡುವುದು)

# ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಡಿ ನೀಡಲಾದ ಅನುದಾನ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–

೩೩೦ (೪೦೫) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ವತಿಯಿಂದ ಯಾವ ಯಾವ ಸಂಘ ಸಂಸ್ಥೆಗಳಿಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ; ಅನುದಾನ ಮಂಜೂರು ಮಾಡಲು ಶಿಫಾರಸ್ಸು ಮಾಡಿರುವವರ ಸಂಪೂರ್ಣ ಮಾಹಿತಿ ಒದಗಿಸುವುದು;

(ಆ) ಇಲಾಖೆ ವತಿಯಿಂದ ಸಂಘ ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಲು ಇರುವ ನಿಯಮಗಳನ್ನು ಪಾಲಿಸಲಾಗುತ್ತಿದೆಯೇ ;

(ಇ) ಸದರಿ ನಿಯಮಾವಳಿಗಳನ್ನು ಪಾಲಿಸದಿರುವ ಸಂಘ ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ನಿಯಮಾವಳಿಗಳನ್ನು ಪಾಲಿಸದೆ ಅನುದಾನ ಪಡೆದಿರುವ ಸಂಘ ಸಂಸ್ಥೆಗಳು ಯಾವುವು ; ಪಡೆದಿರುವ ಅನುದಾನ ಎಷ್ಟು ? (ಕಳೆದ ೩ ವರ್ಷಗಳ ಸಂಪೂರ್ಣ ವಿವರ ನೀಡುವುದು)

(ಈ) ಈ ಪ್ರಕರಣದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ನಿಯಮಾವಳಿಗಳನ್ನು ಪಾಲಿಸದಿರುವ ಸಂಘ ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಿದ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ; ಸ್ಪಷ್ಟ ಮಾಹಿತಿ ಒದಗಿಸುವುದು ? (ಬೀದರ್ ಜಿಲ್ಲೆಗೆ ಸಂಬಂಧಪಟ್ಟ ಮಾಹಿತಿ ನೀಡುವುದು)

## ಸೌಲಭ್ಯ ಪೂರ್ಣ ಆದರ್ಶ ಗ್ರಾಮ ನಿರ್ಮಾಣ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–

೩೩೧ (೪೦೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಾದ್ಯಂತ ಗ್ರಾಮ ಸಂಪರ್ಕಕ್ಕೆ ಬಾಕಿ ಇರುವ ರಸ್ತೆಗಳ ಉದ್ದಎಷ್ಟು ; ಇದಕ್ಕೆ ಬೇಕಾಗಿರುವ ಅನುದಾನದ ಮೊತ್ತವೆಷ್ಟು ; ಕೇಂದ್ರದ ಹಾಗೂ ರಾಜ್ಯದ ಪಾಲೆಷ್ಟು ; ಪೂರ್ಣ ಸಂಪರ್ಕಕ್ಕೆ ಬೇಕಾದ ಕಾಲಮಿತಿ ಎಷ್ಟು ;

(ಆ) ಪ್ರತಿ ಗ್ರಾಮ ನಿವಾಸಿಗೆ ಯಾವ ರೀತಿಯಲ್ಲಿ ಶುದ್ಧ ಕುಡಿಯುವ ನೀರು ನೀಡಲಾಗುತ್ತಿದೆ ; ಇನ್ನು ಎಷ್ಟು ಗ್ರಾಮಗಳಿಗೆ ಒದಗಿಸಬೇಕಿದೆ; (ಗ್ರಾಮಗಳವಾರು ಮಾಹಿತಿ ನೀಡುವುದು)

(ಇ) ಪ್ರತಿ ಗ್ರಾಮಗಳನ್ನು ಆದರ್ಶ ಗ್ರಾಮವಾಗಿ ಮಾಡಿ, ಇತರ ನಗರಗಳಿಗೆ ವಲಸೆ ಹೋಗುವುದನ್ನು ತಡೆಯಲು ಹಾಕಿಕೊಂಡ ಯೋಜನೆಗಳು ಯಾವುವು ; ಇದಕ್ಕೆ ನಿಗಧಿಪಡಿಸಿರುವ ಅನುದಾನ ಎಷ್ಟು ; ಕೇಂದ್ರ –ರಾಜ್ಯದ ಪಾಲು ಎಷ್ಟು ; ಮಾಹಿತಿ ನೀಡುವುದು?

# ಬೀದರ್–ಬೆಂಗಳೂರು ನೇರ ಬಸ್ ಸಂಚಾರಕ್ಕೆ ಅವಕಾಶ ಕಲ್ಪಿಸುವ ಬಗ್ಗೆ

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–

೩೩೨ (೪೦೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ನಿಂದ ಹೈದರಾಬಾದ್ ಮಾರ್ಗವಾಗಿ ಬೆಂಗಳೂರಿಗೆ ಒಟ್ಟು ಎಷ್ಟು ಬಸ್ಸುಗಳು ಸಂಚರಿಸುತ್ತಿವೆ ; (ಬಸ್ಸುಗಳ ವಿವರ ನೀಡುವುದು)

(ಆ) ಬೀದರ್ ನಿಂದ ಬೆಂಗಳೂರಿಗೆ (ಹೈದರಾಬಾದ್ ನಗರದ ಬಸ್ ನಿಲ್ದಾಣಕ್ಕೆ ಹೋಗದೆ) ನೇರವಾಗಿ ಹೈದರಾಬಾದ್ ರಿಂಗ್ ರಸ್ತೆಯ ಮೂಲಕವೇ ಹೋಗಲು ಹೊಸದಾಗಿ ಎ.ಸಿ. ಸ್ಲೀಪರ್ ಕೋಚ್ ಬಸ್ ಓಡಿಸಿದಲ್ಲಿ ಬೀದರ್ ಜನರಿಗೆ ಬೆಂಗಳೂರಿಗೆ ಸರಿಯಾದ ಸಮಯಕ್ಕೆ ಹೋಗಲು ಮತ್ತು ಬರಲು ಅನುಕೂಲವಾಗುತ್ತದೆ ಈ ಅನುಕೂಲ ಮಾಡಿಕೊಡಲು ಸರ್ಕಾರವು ಯಾವ ಕ್ರಮ ಕೈಗೊಳ್ಳುವುದು ? (ಮಾಹಿತಿ ನೀಡುವುದು)

# ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿನ ಅಧಿಕಾರಿಗಳ ವಿವರ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–

೩೩೩ (೪೦೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಮತ್ತು ಪುರುಷ ಅಧಿಕಾರಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಇಲಾಖೆಯು ವ್ಯಾಪ್ತಿಯ ಎಲ್ಲಾ ಜಿಲ್ಲೆಗಳಲ್ಲಿ ಅಂಗನವಾಡಿ ಕೇಂದ್ರಗಳಲ್ಲಿ ಇರುವ ಬಾಲಕ ಹಾಗೂ ಬಾಲಕಿಯರ ಸಂಖ್ಯೆ ಎಷ್ಟು ;

(ಇ) ಮಹಿಳೆಯರ ಮತ್ತು ಮಕ್ಕಳ ಸಮಸ್ಯೆಗಳನ್ನು ಪರಿಹರಿಸುವ ಸಲುವಾಗಿ ಇಲಾಖೆ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳಾ ಅಧಿಕಾರಿಗಳನ್ನು ನೇಮಿಸಿಕೊಳ್ಳುವ ಬಗ್ಗೆ ಸರ್ಕಾರ ಪರಿಶೀಲನೆ ನಡೆಸುವುದೇ ಮಾಹಿತಿ ನೀಡುವುದು ;

(ಈ) ಇಲ್ಲದಿದ್ದಲ್ಲಿ, ಕಾರಣಗಳೇನು; ಸ್ಪಷ್ಟ ಮಾಹಿತಿ ಒದಗಿಸುವುದು ?

## ಕಳೆದ ೩ ವರ್ಷಗಳಲ್ಲಿ ಮಂಜೂರಾದ ಶುದ್ಧ ನೀರಿನ ಘಟಕಗಳ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–

೩೩೪ (೩೭೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಮಂಜೂರಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳೆಷ್ಟು ; ಪ್ರಸಕ್ತ ಸಾಲಿನಲ್ಲಿ ಎಷ್ಟು ಘಟಕಗಳಿಗೆ ಮಂಜೂರಾತಿ ನೀಡಿ ಕಾಮಗಾರಿ ಪ್ರಾರಂಭಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ತುಮಕೂರು ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಗ್ರಾಮೀಣ ಪ್ರದೇಶಗಳಲ್ಲಿ ಫ್ಲೋರೈಡ್ ಯುಕ್ತ ನೀರಿನಿಂದ ಜನ ಆರೋಗ್ಯದ ಸಮಸ್ಯೆಗಳಿಗೆ ತುತ್ತಾಗುತ್ತಿರುವ ಹಿನ್ನೆಲೆಯಲ್ಲಿ ಆ ಭಾಗಗಳಲ್ಲಿ ಕುಡಿಯುವ ಶುದ್ಧ ನೀರಿನ ಘಟಕ ಸ್ಥಾಪನೆಗೆ ಸರ್ಕಾರ ಯಾವ ಕ್ರಮಕೈಗೊಂಡಿದೆ ; (ವಿವರ ನೀಡುವುದು)

(ಇ) ರಾಜ್ಯದ ಬರಪೀಡಿತ ಹಾಗೂ ಮಳೆ ನೆರಳಿನ ಪ್ರದೇಶಗಳಾದ ತುಮಕೂರಿನ ಬಹುತೇಕ ತಾಲ್ಲೂಕುಗಳಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲಾಗಿದೆ ; ಇವುಗಳಲ್ಲಿ ಎಷ್ಟು ಘಟಕಗಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಎಷ್ಟು ಘಟಕಗಳು ನಿರ್ವಹಣೆ ಇಲ್ಲದೆ ಸಂಪೂರ್ಣ ಹಾಳಾಗಿವೆ ; ಇವುಗಳ ದುರಸ್ಥಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ಸಹಿತ ಮಾಹಿತಿ ನೀಡುವುದು)

## ಗಣಿಬಾಧಿತ ಪ್ರದೇಶಗಳಲ್ಲಿನ ಮಹಿಳೆಯರ ಸಾಮಾಜಿಕ ಹಾಗೂ ಆರ್ಥಿಕ ಭದ್ರತೆ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–

೩೩೫ (೩೭೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯ ಗಣಿಬಾಧಿತ ಪ್ರದೇಶದ ಗ್ರಾಮೀಣ ಭಾಗಗಳಲ್ಲಿ ಸಾಮಾಜಿಕ ಹಾಗೂ ಆರ್ಥಿಕ ಭದ್ರತೆ ಇಲ್ಲದೆ ಖಿನ್ನತೆಗೆ ಒಳಗಾಗಿ ಮಹಿಳೆಯರ ಆತ್ಮಹತ್ಯೆ ಪ್ರಮಾಣ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದ ಅಭಿವೃದ್ಧಿ ಕಾಣದ ಹಿಂದುಳಿದಿರುವ ಗ್ರಾಮೀಣ ಪ್ರದೇಶಗಳಲ್ಲಿ ಮಹಿಳೆಯರು ಮತ್ತು ಮಕ್ಕಳ ಅಪೌಷ್ಟಿಕತೆ ಹೋಗಲಾಡಿಸಲು ಸರ್ಕಾರ ಯಾವ ಯಾವ ಯೋಜನೆಗಳನ್ನು ರೂಪಿಸಿದೆ ; (ವಿವರ ನೀಡುವುದು)

(ಇ) ರಾಜ್ಯದ ಇನ್ನೂ ಎಷ್ಟು ತಾಲ್ಲೂಕುಗಳಲ್ಲಿ ಮಹಿಳೆಯರ ಸಮಸ್ಯೆಗಳ ಬಗ್ಗೆ ಗಮನ ಹರಿಸುವ ಆಪ್ತ ಸಮಾಲೋಚನಾ ಕೇಂದ್ರ ನಿರ್ಮಾಣವಾಗಬೇಕಿದೆ ; ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಆಪ್ತ ಸಮಾಲೋಚನಾ ಕೇಂದ್ರಗಳೆಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ವಾಹನ ಚಾಲನ ಪರವಾನಗಿ ನೀಡಲು ಅನುಸರಿಸುತ್ತಿರುವ ಕ್ರಮಗಳ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–

೩೩೬ (೩೮೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಾಹನ ಚಾಲನಾ ಪರವಾನಗಿ ನೀಡಲು ಅನುಸರಿಸುತ್ತಿರುವ ನಿಯಮಗಳೇನು ; (ವಿವರ ನೀಡುವುದು)

(ಆ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಿಂದ ನೀಡಲಾದ ದ್ವಿಚಕ್ರ ಮತ್ತು ನಾಲ್ಕು ಚಕ್ರ ವಾಹನ ಮತ್ತು ಭಾರಿ ವಾಹನಗಳ ಚಾಲನಾ ಪರವಾನಗಿಗಳು ಎಷ್ಟು ;

(ಇ) ಚಾಲನಾ ಪರವಾನಗಿ ಕೋರಿ ಬಂದಿರುವ ಅರ್ಜಿಗಳೆಷ್ಟು ; ತಿರಸ್ಕರಿಸಿದ ಅರ್ಜಿಗಳೆಷ್ಟು ? (ವಿವರ ನೀಡುವುದು)

## ಮಹಿಳೆಯರು ಮತ್ತು ಮಕ್ಕಳ ಕಲ್ಯಾಣಕ್ಕಾಗಿ ಇರುವ ಯೋಜನೆಗಳ ಬಗ್ಗೆ

ಶ್ರೀ ಪಿ.ಆರ್. ರಮೇಶ (ನಾಮನಿರ್ದೇಶನ ಹೊಂದಿದವರು):–

೩೩೭ (೪೬೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಹಿಳೆಯರಿಗೆ ಮತ್ತು ಮಕ್ಕಳಿಗೆ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಗರ್ಭಿಣಿಯರಿಗೆ ಮತ್ತು ಬಾಣಂತಿಯರಿಗೆ ರೂಪಿಸಿರುವ ಯೋಜನೆಗಳ ಬಗ್ಗೆ ಸಮಗ್ರ ಮಾಹಿತಿ ನೀಡುವುದು ;

(ಇ) ಹಿರಿಯ ನಾಗರಿಕರ ಕಲ್ಯಾಣಕ್ಕಾಗಿ ಇರುವ ಯೋಜನೆಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

## ಪಶುಸಂಗೋಪನೆ ಇಲಾಖೆಯಲ್ಲಿ ರೈತರಿಗೆ ಮತ್ತು ನಿರುದ್ಯೋಗಿಗಳಿಗೆ ಇರುವ ಯೋಜನೆ ಬಗ್ಗೆ

ಶ್ರೀ ಪಿ.ಆರ್. ರಮೇಶ (ನಾಮನಿರ್ದೇಶನ ಹೊಂದಿದವರು):–

೩೩೮ (೪೬೩) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶುಸಂಗೋಪನೆ ಇಲಾಖೆಯಿಂದ ರೈತರಿಗೆ ಹಾಗೂ ನಿರುದ್ಯೋಗಿಗಳಿಗೆ ಅನುಕೂಲವಾಗುವಂತೆ ರೂಪಿಸಲಾಗಿರುವ ಯೋಜನೆಗಳು ಯಾವುವು; (ವಿವರ ನೀಡುವುದು)

(ಆ) ಪಶುಸಂಗೋಪನೆ ಇಲಾಖೆಯಿಂದ ಯೋಜನೆಗಳನ್ನು ಸಕಾಲದಲ್ಲಿ ಫಲಾನುಭವಿಗಳಿಗೆ ನೀಡಲಾಗುತ್ತಿದೆಯೇ ;

(ಇ) ಈ ಯೋಜನೆಗಳ್ನು ಪಡೆದುಕೊಳ್ಳಲು ಇರುವ ಮಾನದಂಡಗಳೇನು;

(ಈ) ಪ್ರಸಕ್ತ ವರ್ಷದಲ್ಲಿ ಎಷ್ಟು ಅನುದಾನವನ್ನು ಈ ಯೋಜನೆಗಳಿಗಾಗಿ ಮೀಸಲಿಡಲಾಗಿದೆ ? (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

## ಚಿತ್ರದುರ್ಗ ನಗರದ ಪ್ರವಾಸಿ ತಾಣಗಳ ಅಭಿವೃದ್ಧಿ ಬಗ್ಗೆ

ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೩೯ (೩೭೫) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ನಗರದ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಚಿತ್ರದುರ್ಗದಲ್ಲಿರುವ ಬೃಹನ್ಮಠದ ಮುಂದಿರುವ ಕೆರೆಯನ್ನು ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ಕಳೆದ ೩ ವರ್ಷಗಳಿಂದ ಚಿತ್ರದುರ್ಗ ಪ್ರವಾಸಿ ತಾಣ ಅಭಿವೃದ್ಧಿಗೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ? (ಮಾಹಿತಿ ಒದಗಿಸುವುದು)

## ಚಿತ್ರದುರ್ಗ–ದಾವಣಗೆರೆ ಗ್ರಾಮ ಪಂಚಾಯಿತಿಗಳ ಬಗ್ಗೆ

ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೪೦ (೩೭೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; ಅದರಲ್ಲಿ ಸ್ವಂತ ಕಟ್ಟಡ ಹೊಂದಿರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ;

(ಆ) ಸ್ವಂತ ಕಟ್ಟಡ ಇಲ್ಲದ ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಗ್ರಾಮ ಪಂಚಾಯ್ತಿ ಸದಸ್ಯರ ಗೌರವಧನ ಕುರಿತು

ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೪೧ (೩೭೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯ್ತಿ ಸದಸ್ಯರಿಗೆ ಗೌರವಧನ ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಗೌರವಧನ ಬಾಕಿ ಬಿಡುಗಡೆಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ಚಿತ್ರದುರ್ಗ–ದಾವಣಗೆರೆ ಜಿಲ್ಲೆಯಲ್ಲಿ ಗ್ರಾಮ ಪಂಚಾಯ್ತಿ ಸದಸ್ಯರಿಗೆ ಬಾಕಿ ಇರುವ ಗೌರವಧನ ಎಷ್ಟು ? (ಮಾಹಿತಿ ಒದಗಿಸುವುದು)

## ಚಿತ್ರದುರ್ಗಕ್ಕೆ ತೆರಳುವ ವೋಲ್ವೋ ಬಸ್‌ಗಳ ಬಗ್ಗೆ

ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೪೨ (೩೭೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನಿಂದ ಚಿತ್ರದುರ್ಗಕ್ಕೆ ಹೋಗುವ ವೋಲ್ವೋ ಬಸ್‌ಗಳು ರಾತ್ರಿ ವೇಳೆ ಚಿತ್ರದುರ್ಗ ಪಟ್ಟಣಕ್ಕೆ ಹೋಗದೆ ಪ್ರಯಾಣಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ವೋಲ್ವೋ ಬಸ್‌ಗಳು ಚಿತ್ರದುರ್ಗ ನಗರ ಬಸ್ ನಿಲ್ದಾಣಕ್ಕೆ ಹೋಗಿ ಬೇರೆ ಊರುಗಳಿಗೆ ತೆರಳಲು ಕೈಗೊಂಡಿರುವ ಕ್ರಮಗಳೇನು; ಇಲ್ಲದಿದ್ದಲ್ಲಿ, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಬಾಲಮಂದಿರಗಳ ಕುರಿತು

ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-

೩೪೩ (೪೪೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಎಷ್ಟು ಬಾಲಕರ ಹಾಗೂ ಬಾಲಕಿಯರ ಬಾಲ ಮಂದಿರಗಳಿವೆ ; ಅವುಗಳಲ್ಲಿ ಎಷ್ಟು ವಿದ್ಯಾರ್ಥಿಗಳು ಆಶ್ರಯ ಪಡೆದಿರುತ್ತಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಒಟ್ಟು ಮಹಿಳಾ ನಿಲಯಗಳು ಎಷ್ಟು ಮತ್ತು ಅದರಲ್ಲಿ ಆಶ್ರಯ ಪಡೆದ ಮಹಿಳೆಯರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಬಾಲಮಂದಿರ ಹಾಗೂ ಮಹಿಳಾ ನಿಲಯಗಳ ನಿರ್ವಹಣೆಗಾಗಿ ಎಷ್ಟು ಸಮಾಜ ಕಾರ್ಯಕರ್ತೆಯರು ಹಾಗೂ ಅಧೀಕ್ಷಕರು ಮತ್ತು ಪ್ರಥಮ ದರ್ಜೆ ಸಹಾಯಕರು ಕಾರ್ಯ ನಿರ್ವಹಿಸುತ್ತಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕ ಸಬಲೀಕರಣ ಇಲಾಖೆಯಲ್ಲಿ ಮಂಜೂರಾದ ಒಟ್ಟು ಹುದ್ದೆಗಳು ಎಷ್ಟು ; ಅವುಗಳಲ್ಲಿ ಎಷ್ಟು ಹುದ್ದೆಗಳು ನಿಧನ, ನಿವೃತ್ತಿ ಮತ್ತು ರಾಜೀನಾಮೆಯಿಂದ ತೆರವಾಗಿವೆ; ಕೇಡರ್ ವೈಸ್ (Cadre wise) ಮಾಹಿತಿ ನೀಡುವುದು ?

## ಅಂಗವಿಕಲರ ಮಾಸಾಶನದ ಬಗ್ಗೆ

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-

೩೪೪ (೩೩೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅಂಗವಿಕಲ ಮಾಸಾಶನ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ಪ್ರಸ್ತುತ ಸರ್ಕಾರ ನೀಡುತ್ತಿರುವ ಅಂಗವಿಕಲ ಮಾಸಾಶನದ ಪ್ರಮಾಣ ಎಷ್ಟು ;

(ಇ) ಸೆಪ್ಟೆಂಬರ್-೨೦೧೯ರ ಮಾಹೆಯಿಂದ ಇಲ್ಲಿಯವರೆಗೆ ಅಂಗವಿಕಲರ ಮಾಸಾಶನವನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸ್ಥಗಿತಗೊಳಿಸಲು ಕಾರಣವೇನು ;

(ಉ) ಯಾವಾಗ ಬಿಡುಗಡೆ ಮಾಡಲಾಗುವುದು ? (ವಿವರ ನೀಡುವುದು)

## ಪಿ.ಡಿ.ಓ ಹುದ್ದೆಯನ್ನು ಗ್ರೂಪ್ 'ಬಿ' ಗೆ ಮೇಲ್ದರ್ಜೆಗೇರಿಸುವ ಬಗ್ಗೆ

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-

೩೪೫ (೩೪೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆಯನ್ನು ಗ್ರೂಪ್ 'ಬಿ' ಹುದ್ದೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಈ ಪ್ರಸ್ತಾವನೆಯನ್ನು ೬ನೇ ವೇತನ ಆಯೋಗದ ಮುಂದೆ ತಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ೬ನೇ ವೇತನ ಆಯೋಗವು ತನ್ನ ೨ನೇ ವರದಿ ನೀಡಿದ್ದು, ಈ ಬಗ್ಗೆ ತಿಳಿಸಿರುವ ಅಭಿಪ್ರಾಯವೇನು ;

(ಈ) ಪಿ.ಡಿ.ಓ ಹುದ್ದೆಯನ್ನು 'ಬಿ' ವೃಂದಕ್ಕೇರಿಸಲು ಸರ್ಕಾರದ ಒಟ್ಟಾರೆ ನಿಲುವೇನು ?

## ಗ್ರಾಮ ಪಂಚಾಯತಿಗಳಲ್ಲಿ ಮನೆಗಳನ್ನು ಹಂಚಿಕೆ ಮಾಡುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೪೬ (೨೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗ್ರಾಮ ಪಂಚಾಯತಿಗಳಲ್ಲಿ ವಸತಿ ಯೋಜನೆಗಳ ಫಲಾನುಭವಿಗಳ ಆಯ್ಕೆಯಲ್ಲಿನ ನಿಬಂಧನೆ ಹಾಗೂ ನಿಯಮಗಳೇನು ; (ವಿವರ ನೀಡುವುದು)

(ಆ) ಒಬ್ಬ ಫಲಾನುಭವಿಯ ಎರಡೂ ಮೂರು ಬಾರಿ ಬೇರೆ ಬೇರೆ ಆಶ್ರಯ ಯೋಜನೆಗಳಲ್ಲಿ ಮನೆಗಳನ್ನು ಪಡೆದಿದ್ದರೆ ಇದಕ್ಕೆ ಹೊಣೆಗಾರರು ಯಾರು ; ಅವರಿಂದ ಅನುದಾನವನ್ನು ವಾಪಸ್ ಪಡೆಯಲು ಇರುವ ನಿಯಮಗಳೇನು ;

(ಇ) ಗ್ರಾಮ ಪಂಚಾಯತಿ ಸದಸ್ಯ ಅಥವಾ ಮಾಜಿ ಸದಸ್ಯರೇ ಎರಡೂ ಮೂರು ಬಾರಿ ಬೇರೆ ಬೇರೆ ಆಶ್ರಯ ಯೋಜನೆಗಳಲ್ಲಿ ಮನೆಗಳನ್ನು ಪಡೆದಿದ್ದಲ್ಲಿ ಅವರ ಮೇಲೆ ತೆಗೆದುಕೊಳ್ಳುವ ಕಾನೂನು ಕ್ರಮಗಳೇನು; (ವಿವರ ನೀಡುವುದು)

(ಈ) ಈ ಕುರಿತಾಗಿ ರಾಜ್ಯದಲ್ಲಿ ಸರ್ಕಾರದ ಗಮನಕ್ಕೆ ಬಂದ ಪ್ರಕರಣಗಳು ಎಷ್ಟು ; ಅಂತಹ ಪ್ರಕರಣ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಗ್ರಾಮ ಪಂಚಾಯತಿಗಳಲ್ಲಿ ಕಸ ವಿಲೇ ಮಾಡಲು ಜಾಗ ಇಲ್ಲದಿರುವ ಬಗ್ಗೆ

ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೩೪೭ (೩೫೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಕಸ ವಿಲೇವಾರಿಗೆ ಜಾಗ ಮೀಸಲಿಡಲಾಗಿದೆಯೇ ;

(ಆ) ರಾಜ್ಯದ ಯಾವ ಯಾವ ಗ್ರಾಮ ಪಂಚಾಯತಿಗಳಲ್ಲಿ ಕಸ ವಿಲೇವಾರಿಗೆ ಜಾಗ ಇರುವುದಿಲ್ಲ ; (ಮಾಹಿತಿ ನೀಡುವುದು)

(ಇ) ಈಗಾಗಲೇ ಕಸ ವಿಲೇವಾರಿಗೆ ಮಂಜೂರಾಗಿರುವ ಜಾಗವನ್ನು ಒತ್ತುವರಿ ಮಾಡಿಕೊಂಡಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಗ್ರಾಮ ಪಂಚಾಯತಿಗಳಲ್ಲಿ ಕಸ ವಿಲೇವಾರಿಗೆ ಮೀಸಲಿಟ್ಟ ಜಾಗವನ್ನು ಒತ್ತುವರಿ ಮಾಡಲಾಗಿದೆ; ಈ ಪ್ರಕರಣಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಈ ಬಗ್ಗೆ ಸರ್ಕಾರ ಗ್ರಾಮ ಪಂಚಾಯತಿಗಳಿಗೆ ಯಾವ ಆದೇಶ ಜಾರಿಗೊಳಿಸಿದೆ ?

## ನಮ್ಮ ಹೊಲ ನಮ್ಮ ರಸ್ತೆ ಯೋಜನೆ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)
ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೪೮ (೩೮೬+೪೪೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ನಮ್ಮ ಹೊಲ–

ನಮ್ಮ ರಸ್ತೆ ಯೋಜನೆಯಡಿ ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಆದೇಶದಂತೆ "ನಮ್ಮ ಹೊಲ ನಮ್ಮ ರಸ್ತೆ" ಯೋಜನೆಯಡಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳಾವುವು ; ಈ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿದೆ ; (ಮಾಹಿತಿ ನೀಡುವುದು) ಸದರಿ ಕಾಮಗಾರಿಗಳಲ್ಲಿ ನಿಗದಿಪಡಿಸಿದ ಕಾಲಮಿತಿಯೊಳಗೆ ಕಾಮಗಾರಿಗಳು ಪೂರ್ತಿಯಾಗದೆ ವಿಳಂಬವಾಗಿರುವುದಕ್ಕೆ ಕಾರಣವೇನು ;

(ಇ) ಈ ಕಾಮಗಾರಿಗಳಿಗೆ ನಿಗದಿಪಡಿಸಿ, ಬಿಡುಗಡೆ ಮಾಡಿ, ವೆಚ್ಚ ಮಾಡಿರುವ ಅನುದಾನದ ಮೊತ್ತವೆಷ್ಟು ; (ವಿವರ ನೀಡುವುದು) ಕಾಮಗಾರಿಗಳು ಪೂರ್ತಿಯಾಗದೆ ಉಳಿದಿರುವ ಅನುದಾನದ ಮೊತ್ತವೆಷ್ಟು ; (ವಿವರ ನೀಡುವುದು)

(ಈ) ಈ ಯೋಜನೆಯಡಿ ಮಂಜೂರಾದ ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಾಗದಿರಲು ಕಾರಣಗಳೇನು ; ಯಾವಾಗ ಬಿಡುಗಡೆ ಮಾಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಶುದ್ಧ ನೀರಿನ ಘಟಕಗಳ ಸ್ಥಾಪನೆ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

೩೪೪ (೩೮೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ೩ ವರ್ಷಗಳಿಂದ ನಿರ್ಮಾಣ ಮಾಡಿರುವ ಶುದ್ಧ ನೀರಿನ ಘಟಕಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಶುದ್ಧ ನೀರಿನ ಘಟಕಗಳನ್ನು ಯಾವ ಯಾವ ಏಜೆನ್ಸಿ ಮುಖಾಂತರ ನಿರ್ವಹಿಸಲಾಗುತ್ತದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಈ ಶುದ್ಧ ನೀರಿನ ಘಟಕಗಳ ಏಜೆನ್ಸಿಗಳು ನಿರ್ವಹಣೆ ಮಾಡಿದ ನಂತರ ಈ ಘಟಕಗಳ ನಿರ್ವಹಣೆ ಜವಾಬ್ದಾರಿಯನ್ನು ಯಾರು ನಿರ್ವಹಿಸುತ್ತಾರೆ ; (ಮಾಹಿತಿ ನೀಡುವುದು)

(ಈ) ಧರ್ಮಸ್ಥಳ ಸಂಸ್ಥೆಯಿಂದ ಶುದ್ಧ ನೀರಿನ ಘಟಕಗಳು ಸರ್ಕಾರದ ವತಿಯಿಂದ ಕಾರ್ಯನಿರ್ವಹಿಸುತ್ತಿದೆಯೇ ; ಹಾಗಿದ್ದಲ್ಲಿ, ಅದಕ್ಕೆ ತಗಲುವ ವೆಚ್ಚ ಎಷ್ಟು ; ಮತ್ತು ಸಂಖ್ಯೆ ಎಷ್ಟು ?

## ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ತ್ಯಾಜ್ಯ ನಿರ್ವಹಣೆ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

೩೫೦ (೩೮೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ತ್ಯಾಜ್ಯ ನಿರ್ವಹಣೆ ವ್ಯವಸ್ಥೆ ಅಳವಡಿಸಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಪ್ರಸ್ತಾವನೆಯನ್ನು ಯಾವಾಗ ಅನುಮೋದಿಸಲಾಗುವುದು ;

(ಇ) ಈ ಯೋಜನೆಗೆ ಸರ್ಕಾರ ನಿಗಧಿಪಡಿಸಿರುವ ಅನುದಾನದ ಮೊತ್ತವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಮುಧೋಳ ತಾಲ್ಲೂಕಿನಲ್ಲಿ ಒಳಚರಂಡಿ ವ್ಯವಸ್ಥೆ ಕುರಿತು

ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) :-

೩೫೧ (೩೫೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುಧೋಳ ತಾಲ್ಲೂಕಿನಲ್ಲಿ ಬಹಳಷ್ಟು ಚರಂಡಿಗಳು ದುರಸ್ಥಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಒಳಚರಂಡಿ ಕಾಮಗಾರಿಗಳನ್ನು ಕೈಗೊಳ್ಳಲು ಹಾಕಿಕೊಂಡಿರುವ ನಿರ್ಧಿಷ್ಟ ಕಾರ್ಯಕ್ರಮಗಳೇನು;

(ಆ) ಮುಧೋಳ ತಾಲ್ಲೂಕಿಗೆ ಒಳಚರಂಡಿ ದುರಸ್ಥಿಗಾಗಿ ಒದಗಿಸಲಾದ ಹಣ ಎಷ್ಟು; ಇದುವರೆಗೆ ಖರ್ಚು ಮಾಡಲಾದ ಹಣವೆಷ್ಟು; (ಮಾಹಿತಿ ಒದಗಿಸುವುದು)

(ಇ) ಒಳಚರಂಡಿ ದುರಸ್ಥಿ ಕಾಮಗಾರಿಗಳನ್ನು ಕೈಗೊಳ್ಳಲಾಗಿರುವ ವಿವಿಧ ಭಾಗಗಳಾವುವು; (ವಿವರ ನೀಡುವುದು)

(ಈ) ಮುಧೋಳ ತಾಲ್ಲೂಕಿನಲ್ಲಿ ಪೂರ್ಣಗೊಂಡಿರುವ ಒಳಚರಂಡಿ ದುರಸ್ಥಿ ಕಾಮಗಾರಿಗಳು ಎಷ್ಟು ? (ವಿವರ ನೀಡುವುದು)

## ಬಾಗಲಕೋಟೆ ಜಿಲ್ಲೆಯಲ್ಲಿ ರಸ್ತೆ ನಿರ್ಮಾಣ ಕುರಿತು

ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) :–

೩೫೨ (೩೫೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆಯಲ್ಲಿ ರಸ್ತೆ ನಿರ್ಮಾಣಕ್ಕಾಗಿ ಮೀಸಲಿಡಲಾದ ಹಣವೆಷ್ಟು; ಇದುವರೆಗೆ ನಿರ್ಮಾಣ ಮಾಡಿದ ರಸ್ತೆಗಳೆಷ್ಟು ;

(ಆ) ಈ ರಸ್ತೆಗಳ ನಿರ್ಮಾಣಕ್ಕಾಗಿ ವೆಚ್ಚ ಮಾಡಿರುವ ಹಣವೆಷ್ಟು; (ವಿವರ ನೀಡುವುದು)

## ಮುಧೋಳ ತಾಲ್ಲೂಕಿನ ರಾಜ್ಯ ರಸ್ತೆ ಸಾರಿಗೆ ಬಸ್ ನಿಲ್ದಾಣದ ಬಗ್ಗೆ

ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) :–

೩೫೩ (೩೬೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮುಧೋಳ ತಾಲ್ಲೂಕಿನ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ನಿಲ್ದಾಣ ನಿರ್ಮಾಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದಲ್ಲಿ, ಇದುವರೆಗೆ ಬಸ್ ನಿಲ್ದಾಣ ಕಾಮಗಾರಿ ಮುಕ್ತಾಯಗೊಂಡಿದ್ದರೂ ಉದ್ಘಾಟನೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಸ್ ನಿಲ್ದಾಣದ ಮುಂಭಾಗದಲ್ಲಿ ರಸ್ತೆ ಡಾಂಬರೀಕರಣವಾಗದೆ ಇದ್ದು, ಧೂಳಿನಿಂದ ರಸ್ತೆ ಅವೃತ್ತವಾಗಿ ಸಾರ್ವಜನಿಕರಿಗೆ ತೊಂದರೆಯುಂಟಾಗಿರುವುದು ಸರ್ಕಾರಕ್ಕೆ ತಿಳಿದಿದೆಯೇ; ತಿಳಿದಿದ್ದಲ್ಲಿ, ಇದರ ಪರಿಹಾರಕ್ಕಾಗಿ ಸರ್ಕಾರವು ಕೈಗೊಂಡಿರುವ ನಿರ್ದಿಷ್ಟ ಕ್ರಮಗಳೇನು?

## ಕಲಬುರಗಿ ಜಿಲ್ಲೆಯಲ್ಲಿ ಸಮುದಾಯ ಶೌಚಾಲಯಗಳು

ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು) :–

೩೫೪ (೩೬೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸ್ವಚ್ಛ ಭಾರತ ಮಿಷನ್ ಅಡಿಯಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಇದುವರೆವಿಗೂ ಎಷ್ಟು ಸಮುದಾಯ ಶೌಚಾಲಯಗಳನ್ನು ನಿರ್ಮಾಣ ಮಾಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ಬಯಲು ಬಹಿರ್ದೆಸೆ ಮುಕ್ತ ಮಾಡಲು ಆಯ್ಕೆ ಮಾಡಿಕೊಂಡಿರುವ ಗ್ರಾಮ ಪಂಚಾಯಿತಿಗಳೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಇದುವರೆಗೂ ಎಷ್ಟು ಗ್ರಾಮ ಪಂಚಾಯಿತಿಗಳನ್ನು ಬಯಲು ಬಹಿರ್ದೆಸೆ ಮುಕ್ತ ಗ್ರಾಮ ಪಂಚಾಯಿತಿಗಳೆಂದು ಘೋಷಿಸಲಾಗಿದೆ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣ

ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು) :–

೩೫೫ (೩೬೪) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಭಾಗೀಯ ಕೇಂದ್ರವಾಗಿರುವ ಕಲಬುರಗಿಯಲ್ಲಿ ಅಂತಾರಾಷ್ಟ್ರೀಯ ಮಟ್ಟದ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣ ಮಾಡಬೇಕೆಂಬ ಬೇಡಿಕೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕರ್ನಾಟಕ ರಾಜ್ಯ ಕ್ರಿಕೆಟ್ ಮಂಡಳಿ ಈ ನಿಟ್ಟಿನಲ್ಲಿ ತನ್ನ ಒಪ್ಪಿಗೆ ಸೂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ನೀಡುವುದು)

(ಇ) ಹೊಸ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕಾಗಿ ಜಮೀನು ಗುರುತಿಸಲಾಗಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೊಡಗು ಜಿಲ್ಲೆಯ ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–**

**೩೫೬ (೩೪೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–**

**(ಅ) ೨೦೧೭–೨೦೧೮ ಮತ್ತು ೨೦೧೮–೨೦೧೯ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಸಂಭವಿಸಿದ ಪ್ರಕೃತಿ ವಿಕೋಪದಿಂದ ಜಿಲ್ಲೆಯ ಬಹುತೇಕ ಗ್ರಾಮೀಣ ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದಯೇ;**

**(ಆ) ಬಂದಿದ್ದಲ್ಲಿ, ಸದರಿ ರಸ್ತೆಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;**

**(ಇ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ದುರಸ್ಥಿ ಮತ್ತು ಪುನರ್ ನಿರ್ಮಾಣಕ್ಕೆ ಕೈಗೆತ್ತಿಕೊಂಡಿರುವ ರಸ್ತೆಗಳ ವಿವರಗಳೇನು; ಸದರಿ ರಸ್ತೆ ಕಾಮಗಾರಿಗಳಿಗೆ ಬೇಕಾದ ಅಂದಾಜು ಮೊತ್ತ, ಬಿಡುಗಡೆಯಾದ ಅನುದಾನ, ವಿನಿಯೋಗಿಸಿದ ಅನುದಾನ ಸಂಪೂರ್ಣ ವಿವರವನ್ನು ತಾಲ್ಲೂಕುವಾರು ಕಾಮಗಾರಿವಾರು ನೀಡುವುದು ?**

## ಕೊಡಗು ಜಿಲ್ಲೆಯಲ್ಲಿನ ಪ್ರವಾಸಿ ತಾಣಗಳ ಅಭಿವೃದ್ಧಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

**೩೫೭ (೩೪೪) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–**

(ಅ) ಕೊಡಗು ಜಿಲ್ಲೆಯಲ್ಲಿ ಸರ್ಕಾರ ಗುರುತಿಸಿರುವ ಪ್ರವಾಸಿ ತಾಣಗಳ ಸಂಖ್ಯೆ ಎಷ್ಟು; ಅವು ಯಾವುವು; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ತಾಣಗಳಲ್ಲಿ ಪ್ರವಾಸಿಗರಿಗೆ ಬೇಕಾದ ಹಾಗೂ ಅತ್ಯವಶ್ಯಕವಾದ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ;

(ಇ) ಒದಗಿಸಿದ್ದಲ್ಲಿ, ೨೦೧೭-೧೮, ೨೦೧೮-೧೯ ಮತ್ತು ೨೦೧೯-೨೦ನೇ ಸಾಲಿನಲ್ಲಿ ಸದರಿ ತಾಣಗಳಲ್ಲಿ ಕೈಗೊಂಡ ಕಾಮಗಾರಿಗಳ ವಿವರ ಹಾಗೂ ಸದರಿ ಕಾಮಗಾರಿಗಳ ಅಂದಾಜು ಮೊತ್ತ, ಬಿಡುಗಡೆಯಾದ ಅನುದಾನ, ವಿನಿಯೋಗಿಸಿದ ಅನುದಾನ ಹಾಗೂ ಕಾಮಗಾರಿಗಳ ಪ್ರಗತಿ ಹಂತದ ಸಂಪೂರ್ಣ ವಿವರವನ್ನು ನೀಡುವುದು?

## ಬೀದರ್ ಜಿಲ್ಲೆಯ ಹಳ್ಳಿಗಳು ಮತ್ತು ತಾಂಡಾಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೫೮ (೩೫೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲೆಯಲ್ಲಿ ಎಷ್ಟು ಗ್ರಾಮಗಳಲ್ಲಿ/ತಾಂಡಾಗಳಲ್ಲಿ ನೀರಿನ ಸಮಸ್ಯೆ ಇದೆ; ಇದ್ದಲ್ಲಿ, ಸರ್ಕಾರದ ಗಮನಕ್ಕೆ ಬಂದಿದೆಯೇ; ನೀರಿನ ಸಮಸ್ಯೆ ಇರುವ ಗ್ರಾಮಗಳಿಗೆ ನೀರಿನ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು

(ಆ) ಸರ್ಕಾರದಿಂದ ಬೀದರ್ ಜಿಲ್ಲೆಯಲ್ಲಿ ೨೦೧೭-೧೮ ಮತ್ತು ೨೦೧೮-೧೯ನೇ ಸಾಲಿನಲ್ಲಿ ಕುಡಿಯುವ ನೀರನ ಪೈಪ್ ಲೈನ್ ಕಾಮಗಾರಿಗಳಿಗೆ ಖರ್ಚು ಮಾಡಿರುವ ವೆಚ್ಚವೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತು

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೫೯ (೪೪೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆಗೆ ಎಷ್ಟು ಅನುದಾನ ನೀಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪನೆ ಮಾಡಿದರೂ ಜನ ಸಾಮಾನ್ಯರಿಗೆ ಕುಡಿಯುವ ನೀರಿನ ಸೌಲಭ್ಯ ಸಿಗುತ್ತಿಲ್ಲವೇಕೆ;

(ಇ) ಶುದ್ಧ ಕುಡಿಯುವ ನೀರನ ಘಟಕಗಳನ್ನು ಸ್ಥಾಪಿಸಿದ ಕೆಲವು ದಿನಗಳಲ್ಲೇ ಜಿಲ್ಲೆಯಲ್ಲಿ ನೀರಿನ ಘಟಕಗಳು ಕೆಟ್ಟು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದಕ್ಕೆ ಕಾರಣಗಳೇನು?

## ಬೀದರ್ ಜಿಲ್ಲೆಯ ಅಂಗನವಾಡಿ ಕೇಂದ್ರಗಳ ಕುರಿತು

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೩೬೦ (೪೪೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೀದರ್ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಸಂಖ್ಯೆ ಇಲ್ಲದಿದ್ದರೂ ಆಹಾರ ಧಾನ್ಯಗಳ ಬಿಲ್ಲುಗಳ ಎತ್ತುವಳಿ ಮಾಡಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಬೀದರ್ ಜಿಲ್ಲೆಯ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಲ್ಲಿ ಪೌಷ್ಠಿಕ ಆಹಾರವನ್ನು ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ನೀಡುತ್ತಿಲ್ಲದಿರುವುದಕ್ಕೆ ಕಾರಣಗಳೇನು ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಗ್ರಾಮೀಣ ಕುಡಿಯುವ ನೀರಿನ ಸಮಸ್ಯೆ ಕುರಿತು

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೩೬೧ (೪೫೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಿಂದ ಜನ ಸಾಮಾನ್ಯರು ಹಾಗೂ ದನ ಕರುಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೀದರ್ ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ೨೦೧೮–೨೦೧೯ನೇ ಸಾಲಿನಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ನೀಡಿದ ಅನುದಾನ ಎಷ್ಟು; ಪ್ರಸಕ್ತ ಸಾಲಿನಲ್ಲಿ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ನೀಡಿದ ಅನುದಾನ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದ ಪ್ರವಾಸಿ ತಾಣಗಳ ಅಭಿವೃದ್ಧಿ ಬಗ್ಗೆ

ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು):–

೩೬೨ (೩೫೦) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರವಾಸಿ ತಾಣಗಳ ಅಭಿವೃದ್ಧಿ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಯಾವ ಪ್ರವಾಸಿ ತಾಣಗಳು ಈ ಅಭಿವೃದ್ಧಿ ಯೋಜನೆಯಲ್ಲಿ ಒಳಗೊಂಡಿದೆ; (ಪೂರ್ಣ ಮಾಹಿತಿಯನ್ನು ನೀಡುವುದು)

(ಇ) ಪ್ರವಾಸಿ ತಾಣಗಳ ಅಭಿವೃದ್ಧಿಗಾಗಿ ಸರ್ಕಾರ ಮೀಸಲಿಟ್ಟ ಅನುದಾನವೆಷ್ಟು ? (ವಿವರವನ್ನು ಒದಗಿಸುವುದು)

## ಮುಸ್ಲಿಂ ವಸತಿ ಶಾಲೆಗಳ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–

೩೬೩ (೩೩೩) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಡಿಯಲ್ಲಿ ಎಷ್ಟು ಮುಸ್ಲಿಂ ವಸತಿ ಶಾಲೆಗಳಿವೆ; (ಜಿಲ್ಲಾವಾರು ಮಾಹಿತಿ ನೀಡುವುದು) ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಅದರಲ್ಲಿ ಹೆಣ್ಣು ಮಕ್ಕಳ ಸಂಖ್ಯೆ ಎಷ್ಟು;

(ಆ) ರಾಜ್ಯದಲ್ಲಿರುವ ಅಲ್ಪಸಂಖ್ಯಾತರ ವಸತಿ ಶಾಲೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಈ ವಸತಿ ಶಾಲೆಗಳಲ್ಲಿ ಯಾವ ಯಾವ ಧರ್ಮದ ಅಲ್ಪಸಂಖ್ಯಾತರು ವಿದ್ಯಾಭ್ಯಾಸ ಮಾಡುತ್ತಿದ್ದಾರೆ; ಜಾತಿವಾರು ಜಿಲ್ಲಾವಾರು ವಿವರ ನೀಡುವುದು; ವಸತಿ ಶಾಲೆಗಳಲ್ಲಿ ಯಾವ ಯಾವ ಧರ್ಮದವರಿಗೆ ಪ್ರಾರ್ಥನೆ ಸಲ್ಲಿಸಲು ಸ್ಥಳಾವಕಾಶ ನೀಡಲಾಗಿದೆ ;

(ಇ) ದಿನಾಂಕ:೧೯-೦೫-೨೦೧೮ರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ನಿರ್ದೇಶಕರ ಆದೇಶದಲ್ಲಿ ಇಲಾಖೆಯ ಆಡಳಿತಕ್ಕೆ ಒಳಪಡುವ ಎಲ್ಲಾ ವಸತಿ ಶಾಲೆಗಳಲ್ಲಿ ಅರೆಬಿಕ್ ಶಿಕ್ಷಣ ಭೋಧಿಸಲು ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು;

(ಈ) ಇಲಾಖೆಯ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಮುಸ್ಲಿಂ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಇತರ ಧರ್ಮದ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿರುವುದರಿಂದ ಈ ವಿದ್ಯಾರ್ಥಿಗಳಿಗೂ ಅರೆಬಿಕ್ ಶಿಕ್ಷಣ ಮತ್ತು ಶುಕ್ರವಾರದ ಪ್ರಾರ್ಥನೆಯನ್ನು ಕಡ್ಡಾಯಗೊಳಿಸಿ ಹೊರಡಿಸಿರುವ ಆದೇಶವು ಕಾನೂನು ಸುವ್ಯವಸ್ಥೆಗೆ ಧಕ್ಕೆ ಉಂಟು ಮಾಡುವ ಬಗ್ಗೆ ಸರ್ಕಾರದ ನಿಲುವೇನು ?

## ಖಾಸಗಿ ಸಾರಿಗೆ ಬಸ್ಸುಗಳ ಸಂಚಾರ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

೩೬೪ (೩೩೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಖಾಸಗಿ ಸಾರಿಗೆ ಸಂಸ್ಥೆಯವರು ಕಾರ್ಯ ನಿರ್ವಹಿಸುತ್ತಿದ್ದಾರೆ;

(ಆ) ಖಾಸಗಿ ಸಾರಿಗೆ ಸಂಸ್ಥೆಯವರು ಹಬ್ಬದ ದಿನಗಳಂದು ಮತ್ತು ಸರ್ಕಾರಿ ರಜಾ ದಿನಗಳಂದು ಸಂಚರಿಸುವ ಬಸ್ಸುಗಳ ಟಿಕೇಟು ದರಗಳನ್ನು ಅತಿ ಹೆಚ್ಚು ಏರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಕಳೆದ ೬ ತಿಂಗಳಿನಲ್ಲಿ ಈ ರೀತಿ ದರ ಏರಿಸಿರುವ ಎಷ್ಟು ಬಸ್ಸುಗಳ ಪರವಾನಿಗೆಯನ್ನು ರದ್ದುಗೊಳಿಸಲಾಗಿದೆ;

(ಈ) ಸರ್ಕಾರಿ ಬಸ್ಸುಗಳನ್ನು ಲೋಕಲ್ ಸಾರಿಗೆಯ ರೂಪದಲ್ಲಿ ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಬಳಸಲಾಗುತ್ತಿದೆ; ಎಷ್ಟು ಬಸ್ಸುಗಳನ್ನು ಬಳಸಲಾಗುತ್ತಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಮಾರ್ಗಗಳಲ್ಲಿ (Route) ಸರ್ಕಾರಿ ಬಸ್ಸುಗಳನ್ನು ಸಾರ್ವಜನಿಕ ಸಾರಿಗೆಯ ರೂಪದಲ್ಲಿ ಬಳಸಲಾಗುತ್ತಿದೆ; ಎಷ್ಟು ಬಸ್ಸುಗಳನ್ನು ಬಳಸಲಾಗುತ್ತಿದೆ; ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಬಸ್ಸುಗಳನ್ನು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ವೃದ್ಧ ಪಾಲಕರ ರಕ್ಷಣೆ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–

೩೬೫ (೩೩೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವೃದ್ಧ ಪಾಲಕರನ್ನು ಇಂದಿನ ಯುವ ಜನಾಂಗ ಕಡೆಗಣಿಸುತ್ತಿದ್ದು ಅಸಾಹಯಕ ವೃದ್ಧರ ರಕ್ಷಣೆ ಮತ್ತು ಸುರಕ್ಷತೆಯ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಆ) ವೃದ್ಧಾಶ್ರಮ ಮತ್ತು ಅನಾಥಾಶ್ರಮಗಳನ್ನು ಸಂಯೋಜಿಸಿ ಮನೆ ವಾತಾವರಣ ಇರುವಂತಹ ಹೊಸ ತರಹದ ಪಾಲನಾ ಗೃಹಗಳನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರದ ನಿಲುವೇನು;

(ಇ) ವೃದ್ಧರನ್ನು ಕಡೆಗಣಿಸಿ ಅವರ ಅಂತಿಮ ದಿನಗಳಲ್ಲಿ ಬೀದಿಗೆ ದೂಡುವ ಕುಟುಂಬಸ್ಥರ ಮೇಲೆ ಕ್ರಮ ಕೈಗೊಳ್ಳುವ ಕಾನೂನು ರೂಪಿಸುವ ಬಗ್ಗೆ ಸರ್ಕಾರ ಚಿಂತಿಸುವುದೇ ?

## ದೇಸಿ ಗೋವುಗಳ ರಕ್ಷಣೆ ಹಾಗೂ ಅವುಗಳ ತಳಿ ಅಭಿವೃದ್ಧಿ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–

೩೬೬ (೩೩೬) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೇಸಿ ಗೋವುಗಳ ರಕ್ಷಣೆ ಮತ್ತು ಅವುಗಳ ತಳಿ ಅಭಿವೃದ್ಧಿಗೆ ಸಂಬಂಧಿಸಿದಂತೆ ಸರ್ಕಾರ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ;

(ಆ) ಜಾನುವಾರುಗಳ ಅಕ್ರಮ ಸಾಗಾಟ ಮತ್ತು ಅನಧಿಕೃತ ಕಸಾಯಿ ಖಾನೆಗಳಲ್ಲಿ ಗೋವುಗಳನ್ನು ಮಾಂಸಕ್ಕಾಗಿ ಹತ್ಯೆ ಮಾಡುತ್ತಿರುವುದರಿಂದ ರಾಜ್ಯದಲ್ಲಿ ಗೋವುಗಳ ಪ್ರಮಾಣ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಅಕ್ರಮವಾಗಿ ಗೋವುಗಳ ಸಾಗಾಟ ಮತ್ತು ಹತ್ಯೆಯನ್ನು ನಿಲ್ಲಿಸಲು ಗೋವುಗಳ ಸಂರಕ್ಷಣಾ ಕಾನೂನನ್ನು ರಚಿಸುವ ಬಗ್ಗೆ ಸರ್ಕಾರದ ನಿಲುವೇನು; ಗೋವುಗಳ ಸಂರಕ್ಷಣಾ ಕಾನೂನನ್ನು ಯಾವಾಗ ರಚಿಸಲಾಗುವುದು ಮತ್ತು ಜಾರಿಗೆ ತರಲಾಗುವುದು ಯಾವಾಗ?

## ಕಂಬಳ ಕ್ರೀಡೆಯ ಅಭಿವೃದ್ಧಿ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–

೩೬೭ (೩೩೭) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರಾವಳಿ ಭಾಗದ ಕಂಬಳ ಜಾನಪದ ಕ್ರೀಡೆಗೆ ಪ್ರೋತ್ಸಾಹ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಕಳೆದ ಎರಡು ವರ್ಷಗಳಲ್ಲಿ ಎಷ್ಟು ಕಂಬಳ ಕ್ರೀಡೆಗಳು ಜರುಗಿವೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಂಬಳ ಕ್ರೀಡೆಯಲ್ಲಿ ಭಾಗವಹಿಸುವ ಸ್ಪರ್ಧಾಳುಗಳಿಗೆ ಸರ್ಕಾರ ಯಾವ ಯಾವ ಸೌಲಭ್ಯ ನೀಡುತ್ತಿದೆ;

(ಇ) ಕಂಬಳ ಕ್ರೀಡೆಯ ಕುರಿತು ಯುವ ಜನತೆಯಲ್ಲಿ ಜಾಗೃತಿ ಮೂಡಿಸಿ ಜನಪ್ರಿಯಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಕಂಬಳ ಕ್ರೀಡೆಯಲ್ಲಿ ಭಾಗವಹಿಸುವ ಸ್ಪರ್ಧಾಳುಗಳಿಗೆ ತರಬೇತಿ ನೀಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; ಇಲ್ಲವಾದಲ್ಲಿ, ಈ ಕ್ರೀಡೆಯ ಉಳಿವು ಮತ್ತು ಬೆಳವಣಿಗೆಗೆ ಸರ್ಕಾರ ಯಾವ ನಿಲುವು ಕೈಗೊಳ್ಳುತ್ತಿದೆ? (ವಿವರ ನೀಡಿರುವುದು)

## ಹೆಚ್.ಡಿ. ಕೋಟೆ ಸರಗೂರು ಬಸ್ ಸೌಲಭ್ಯ

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೩೬೮ (೩೭೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೆಗ್ಗಡದೇವನ ಕೋಟೆಯಿಂದ ನೂತನ ತಾಲ್ಲೂಕು ಕೇಂದ್ರವಾದ ಸರಗೂರಿಗೆ, ಸರಗೂರಿನಿಂದ ಹೆಚ್.ಡಿ. ಕೋಟೆಗೆ ಇರುವ ಸಾರಿಗೆ ಬಸ್‌ಗಳ ಸೌಲಭ್ಯವನ್ನು ಹೆಚ್ಚಳ ಮಾಡಲು ಕ್ರಮ ಜರುಗಿಸಲಾಗುವುದೇ;

(ಆ) ಸರಗೂರಿಗೆ ಅನೇಕ ಕಡೆಗಳಿಂದ ಬಸ್ ಬಂದರೂ, ಎಲ್ಲಾ ಬಸ್‌ಗಳೂ ಭರ್ತಿಯಾಗಿರುವುದರಿಂದ ಸರಗೂರಿನಲ್ಲಿ ಸಾರ್ವಜನಿಕರು, ವಿದ್ಯಾರ್ಥಿಗಳು ಬಸ್ ಹತ್ತಲು ಸಾಧ್ಯವಾಗದ ಕಾರಣ ಸಾರಿಗೆ ವ್ಯವಸ್ಥೆಯಿಂದ ವಂಚಿತರಾಗಿದ್ದು, ಹೆಚ್.ಡಿ. ಕೋಟೆ ಡಿಪೋದಿಂದಲೇ ಸರಗೂರಿಗೆ ಬಸ್ ಸೌಲಭ್ಯ ಕಲ್ಪಿಸಲಾಗುವುದೇ;

(ಇ) ಚೆನ್ನಗುಂಡಿ ಗ್ರಾಮದಿಂದ ಸರಗೂರು, ಹೆಚ್.ಡಿ. ಕೋಟೆಗೆ ನೇರ ಬಸ್ ಸೌಲಭ್ಯ ಇಲ್ಲದೆ ತೊಂದರೆ ಆಗಿದ್ದು, ಹೆಡಿಯಾಲಕ್ಕೆ ಬಂದು ಬಸ್ ಹತ್ತಬೇಕಾದ ಪರಿಸ್ಥಿತಿ ಇರುವುದರಿಂದ, ಚೆನ್ನಗುಂಡಿಯಿಂದ ಸರಗೂರು, ಹೆಚ್.ಡಿ. ಕೋಟೆಗೆ ನೇರ ಬಸ್ ಸೌಲಭ್ಯ ಕಲ್ಪಿಸಲಾಗುವುದೇ ?

## ಹೆಗ್ಗಡದೇವನಕೋಟೆ ಸರಗೂರು ನಡುವೆ ಹೆಚ್ಚಿನ ಬಸ್ ಸೌಲಭ್ಯ ಒದಗಿಸುವ ಬಗ್ಗೆ

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೩೬೯ (೪೫೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೆಚ್.ಡಿ. ಕೋಟೆಯಿಂದ ನೂತನ ತಾಲ್ಲೂಕು ಕೇಂದ್ರವಾದ ಸರಗೂರಿಗೆ ಸಾರಿಗೆ ಬಸ್ ಸೌಲಭ್ಯ ಹೆಚ್ಚಿಸಲು ಹಾಗೂ ಈ ಬಸ್‌ಗಳನ್ನು ಹೆಗ್ಗಡದೇವನ ಕೋಟೆ ಬಸ್ ಡಿಪೋಗೆ ಸೇರಿರುವ ಬಸ್‌ಗಳನ್ನೇ ಒದಗಿಸಲು ಕ್ರಮ ಜರುಗಿಸಲಾಗುವುದೇ;

(ಆ) ಕೊತ್ತೇಗಾಲ, ಪುರದಕಟ್ಟೆ, ಹಲಸೂರು, ಮಟಕೆರೆ, ಬಾಳಿಗ, ಹಂಚಿಪುರ, ಚೆನ್ನಗುಂಡಿ, ಹರಳಹಳ್ಳಿ, ಹಾದನೂರು, ಬಡಗಲಪುರ, ಹೆಡಿಯಾಲ ಮೊದಲಾದ ಕಡೆಗಳಿಂದ ಬರುವ ಸಾರ್ವಜನಿಕರು ಹಾಗೂ ಶಾಲಾ ಮಕ್ಕಳಿಗೆ ಸೂಕ್ತ ಕಾಲಕ್ಕೆ ಬಸ್‌ಗಳಿಲ್ಲದೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಚೆನ್ನಗುಂಡಿ ಗ್ರಾಮದಿಂದ ಸರಗೂರು, ಹೆಚ್.ಡಿ. ಕೋಟೆಗೆ ನೇರ ಬಸ್ ಸೌಲಭ್ಯ ಇಲ್ಲದೇ ಈ ಗ್ರಾಮ ಹಾಗೂ ಸುತ್ತಮುತ್ತಲ ಗ್ರಾಮಸ್ಥರು ಹೆಡಿಯಾಲಕ್ಕೆ ಬಂದು ಬಸ್ ಹತ್ತಬೇಕಾಗಿರುವುದರಿಂದ ಚೆನ್ನಗುಂಡಿಯಿಂದ ನೇರ ಬಸ್ ಸೌಲಭ್ಯ ಕಲ್ಪಿಸಲು ಕ್ರಮ ಜರುಗಿಸಲಾಗುವುದೇ?

## ಪಿರಿಯಾಪಟ್ಟಣ ಬಸ್ ನಿಲ್ದಾಣದ ಕಾಮಗಾರಿ ಬಗ್ಗೆ

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೩೭೦ (೪೪೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಿರಿಯಾಪಟ್ಟಣದಲ್ಲಿ ನಿರ್ಮಿಸುತ್ತಿರುವ ಬಸ್ ನಿಲ್ದಾಣದ ಕಾಮಗಾರಿ ಮಂದಗತಿಯಿಂದ ನಡೆಯುತ್ತಿದ್ದು, ಇದನ್ನು ಆದಷ್ಟು ಬೇಗ ಪೂರ್ಣಗೊಳಿಸಲು ಕ್ರಮ ಜರುಗಿಸಲಾಗುವುದೇ; ಯಾವ ಯಾವ ಕಾಮಗಾರಿಗಳು ಬಾಕಿ ಇವೆ; ಯಾವಾಗ ಈ ಕಾಮಗಾರಿಗಳನ್ನು ಸಂಪೂರ್ಣಗೊಳಿಸಲಾಗುತ್ತದೆ;

(ಆ) ಬಸ್ ನಿಲ್ದಾಣದಲ್ಲಿ ಪ್ರಯಾಣಿಕರಿಗೆ ಕುಳಿತುಕೊಳ್ಳಲು ಆಸನ ವ್ಯವಸ್ಥೆಯನ್ನು ಮಾಡಲಾಗುವುದೇ; ರೋಟರಿಯವರು ಹಾಕಿಸಿರುವ ಕಲ್ಲುಬೆಂಚುಗಳನ್ನು ಸೂಕ್ತವಾಗಿ ನಿರ್ವಹಣೆ ಮಾಡಿ ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡಲಾಗುವುದೇ;

(ಇ) ರೋಟರಿಯವರು ನೀಡಿದ್ದ ಶುದ್ಧ ಕುಡಿಯುವ ನೀರಿನ ಘಟಕ ಕೆಟ್ಟುಹೋಗಿದ್ದು, ಅದನ್ನು ಸರಿಪಡಿಸಿ ಪ್ರಯಾಣಿಕರಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲಾಗುವುದೇ ?

## ಗುಂಡ್ಲುಪೇಟೆ ತಾಲ್ಲೂಕು ಬೇಗೂರು ಕೆರೆಗೆ ಕೊಳಚೆ ನೀರು ಹರಿಯದಂತೆ ತಡೆಗಟ್ಟುವ ಕುರಿತು

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೩೭೧ (೪೪೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗುಂಡ್ಲುಪೇಟೆ ತಾಲ್ಲೂಕು, ಬೇಗೂರು ಕೆರೆಗೆ ಕೊಳಚೆ ನೀರು ಸೇರಿ ದುರ್ವಾಸನೆ ಬರುತ್ತಿರುವುದು, ಕ್ರಿಮಿಕೀಟಗಳ ಹಾವಳಿಯಿಂದ ಜನರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕೆರೆ ಸಮೀಪ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರ, ಬಸ್ ನಿಲ್ದಾಣ, ಚುಜ್ಜಲಪ್ಪನ ದೇವಾಲಯದವರೆಗೆ ದುರ್ವಾಸನೆ ಬರುತ್ತಿದ್ದು, ಜನಗಳ ಆರೋಗ್ಯದ ಮೇಲೆ ಪರಿಣಾಮ ಬೀರುವುದರಿಂದ, ಕೊಳಚೆ ನೀರು ಕೆರೆಗೆ ಹರಿಯದಂತೆ ತಡೆಗಟ್ಟಲಾಗುವುದೇ; ಹಾಗೂ ಕೆರೆಯನ್ನು ಪುನಶ್ಚೇತನಗೊಳಿಸಿ, ಹೊಸದಾಗಿ ನದಿ ಮೂಲದಿಂದ ನೀರು ತುಂಬಿಸಲಾಗುವುದೇ?

# ಗ್ರಾಮೀಣ ವಸತಿ ಯೋಜನೆ ಕುರಿತು

ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

೩೭೨ (೩೫೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಿಗೆ ವಿವಿಧ ಗ್ರಾಮೀಣ ವಸತಿ ಯೋಜನೆಗಳ ಅಡಿಯಲ್ಲಿ ಕಳೆದ ೫ ವರ್ಷಗಳಲ್ಲಿ ಮಂಜೂರಾದ ಒಟ್ಟು ಮನೆಗಳ ಸಂಖ್ಯೆ ಎಷ್ಟು; (ವರ್ಷವಾರು ಮತ್ತು ಗ್ರಾಮ ಪಂಚಾಯತಿವಾರು ಮಾಹಿತಿ ನೀಡುವುದು)

(ಆ) ಸದರಿ ಮನೆಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ಹಾಗೂ ಬಿಡುಗಡೆಗೆ ಬಾಕಿ ಇರುವ ಅನುದಾನ ಎಷ್ಟು; (ವರ್ಷವಾರು ಮತ್ತು ಗ್ರಾಮ ಪಂಚಾಯತಿವಾರು ಮಾಹಿತಿ ನೀಡುವುದು)

(ಇ) ವಸತಿ ಯೋಜನೆಗಳಿಗೆ ಅನುದಾನ ಬಿಡುಗಡೆ ಮಾಡಲು ಅನುದಾನದ ಕೊರತೆ ಇದೆಯೇ; ಅನುದಾನದ ಕೊರತೆ ಇಲ್ಲದಿದ್ದಲ್ಲಿ, ಅನುದಾನ ಬಿಡುಗಡೆ ಮಾಡಲು ವಿಳಂಬ ಆಗಿರುವುದಕ್ಕೆ ಕಾರಣಗಳೇನು;

(ಈ) ಗ್ರಾಮೀಣ ಬಡ ಜನರು ವಿವಿಧ ಕಾರಣಗಳಿಂದಾಗಿ ಮನೆಗಳನ್ನು ಕಟ್ಟಿಕೊಳ್ಳದಿರುವುದರಿಂದ ಹಲವಾರು ಮನೆಗಳು ಬ್ಲಾಕ್ ಆಗಿದ್ದು ಇಂತಹ ಬ್ಲಾಕ್ ಆಗಿರುವ ಒಟ್ಟು ಮನೆಗಳ ಸಂಖ್ಯೆಯನ್ನು ಗ್ರಾಮ ಪಂಚಾಯತಿವಾರು ವಿವರ ನೀಡುವುದು;

(ಉ) ಬ್ಲಾಕ್ ಆಗಿರುವ ಮನೆಗಳನ್ನು ತೆರವುಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಬ್ಲಾಕ್ ತೆರವುಗೊಳಿಸಿ ಫಲಾನುಭವಿಗಳಿಗೆ ಮನೆ ಕಟ್ಟಿಕೊಳ್ಳಲು ಒಂದು ಅವಕಾಶ ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ?

# ಹೊಸದಾಗಿ ನೇಮಕಗೊಂಡ ಮೇಲ್ವಿಚಾರಕಿಯರ ಸ್ಥಳ ನಿಯುಕ್ತಿ ಕುರಿತು

**ಶ್ರೀ ಸುನೀಲ್‌ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೩ (೩೭೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ಕರ್ನಾಟಕ ಲೋಕಸೇವಾ ಆಯೋಗದಿಂದ ನೇಮಕಗೊಂಡ ಮಹಿಳಾ ಮೇಲ್ವಿಚಾರಕಿಯರ ಸ್ಥಳ ನಿಯುಕ್ತಿಯಲ್ಲಿ ಗೊಂದಲಗಳು ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರಿಪಡಿಸಲು ಕೈಗೊಂಡ ಕ್ರಮಗಳೇನು;

(ಆ) ಮೇಲ್ವಿಚಾರಕಿಯರ ಸ್ಥಳ ನಿಯುಕ್ತಿಯು ನಿಯಮಗಳ ಪ್ರಕಾರ ಆಗಿದೆಯೇ; ಯಾವ ರೀತಿಯಲ್ಲಿ ಸ್ಥಳ ನಿಯುಕ್ತಿಯುನ್ನು ಮಾಡಲಾಗಿದೆ;

(ಇ) ಮೇಲ್ವಿಚಾರಕಿಯರ ಸ್ಥಳ ನಿಯುಕ್ತಿಯನ್ನು ಕೌನ್ಸಿಲಿಂಗ್ ಮೂಲಕ ಮಡಲಾಗಿದೆಯೇ; ಕೌನ್ಸಿಲಿಂಗ್ ಮೂಲಕ ಮಾಡಲಾಗಿದ್ದರೆ, ಎಲ್ಲಾ ಅಭ್ಯರ್ಥಿಗಳಿಗೂ ಏಕಕಾಲದಲ್ಲಿ ಕೌನ್ಸಿಲಿಂಗ್ ಏಕೆ ಮಾಡಲಿಲ್ಲ, ಮತ್ತು ಕೌನ್ಸಿಲಿಂಗ್‌ಗೆ ಹಾಜರಾಗಲು ಎಲ್ಲಾ ಅಭ್ಯರ್ಥಿಗಳಿಗೆ ಸಾಕಷ್ಟು ಕಾಲಾವಕಾಶ ನೀಡಲಾಗಿತ್ತೆ; ನೀಡಲಾಗಿದ್ದರೆ, ಎಷ್ಟು ದಿನಗಳ ಕಾಲಾವಕಾಶ ನೀಡಲಾಗಿತ್ತು;

(ಈ) ಕೌನ್ಸಿಲಿಂಗ್ ಮಾಡುವ ಪೂರ್ವದಲ್ಲಿ ಖಾಲಿ ಹುದ್ದೆಗಳ ಪಟ್ಟಿಯನ್ನು ಅಭ್ಯರ್ಥಿಗಳ ಗಮನಕ್ಕೆ ತರಲಾಗಿತ್ತೆ;

(ಉ) ಕೌನ್ಸಿಲಿಂಗ್‌ಗೆ ಹಾಜರಾಗಲು ಸೂಕ್ತ ಸಮಯಾವಕಾಶವನ್ನು ನೀಡದಿರುವುದಕ್ಕೆ ಕಾರಣಗಳೇನು;

(ಊ) ಆಗಿರುವ ಗೊಂದಲವನ್ನು ಮತ್ತು ಕೆಲವೊಂದು ಅಭ್ಯರ್ಥಿಗಳಿಗೆ ಆಗಿರುವ ಅನ್ಯಾಯವನ್ನು ಸರಿಪಡಿಸಲು ಮತ್ತೊಮ್ಮೆ ಎಲ್ಲಾ ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಕೆ. ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0218/400 ಪ್ರತಿಗಳು/29–02–2020